ಸಂಪುಟ : 9 ಸಂಚಿಕೆ 279 ಪುಟ : 4 ಬೆಲೆ: 3.00 ಬುಧವಾರ ಡಿಸೆಂಬರ್ 18 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 279 Pages : 4 Price : 3.00 Wednesday December 18 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಬಸವರಾಜ ಹೊರಟ್ಟಿ ಕುರಿತ ಸಾಕ್ಷ್ಯಚಿತ್ರ ಲೋಕಾರ್ಪಣೆ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

1980ರಿಂದ ಸತತ 8 ಬಾರಿ ವಿಧಾನಪರಿಷತ್ತಿಗೆ ಆಯ್ಕೆಯಾಗುವ ಮೂಲಕ ಸೋಲನ್ನೇ ಗದರಿಸಿ ಸೋಲಿಲ್ಲದ ಸರದಾರ ಎಂಬ ಕೀರ್ತಿಗೆ ಪಾತ್ರರಾದ ಸಭಾಪತಿ ಬಸವರಾಜ ಹೊರಟ್ಟಿಯವರ 45 ವರ್ಷಗಳ ಸಾರ್ವಜನಿಕ ಬದುಕಿನ ಕುರಿತು ಬಳ್ಳಾರಿ ಜಿಲ್ಲೆಯ ಶಿರಗುಪ್ಪ ತಾಲೂಕಿನ ಸಿರಗೇರಿಯ ಶ್ರೀ ಅನ್ನಪೂರ್ಣ ಕ್ರಿಯೇಶನ್ಸ್‌ನವರು ಹೊರತಂದ ಸಾಕ್ಷ್ಯಚಿತ್ರ ಭಾಗ-1ರ ಬಿಡುಗಡೆ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಡಿ.18ರಂದು ಬೆಳಿಗ್ಗೆ 10 ಗಂಟೆಗೆ ಬೆಳಗಾವಿಯ ಸುವರ್ಣಸೌಧದಲ್ಲಿ ಉದ್ಘಾಟಿಸಲಿದ್ದಾರೆ.

ಬೆಳಗಾವಿಯ ಸುವರ್ಣ ಸೌಧದ ಸಮ್ಮೇಳನ ಸಭಾಂಗಣ(354)ದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಹೊರಟ್ಟಿಯವರ ಕುರಿತ ಸಾಕ್ಷ್ಯಚಿತ್ರ ಭಾಗ-1ರ ಲೋಕಾರ್ಪಣೆಯನ್ನು ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ ನೆರವೇರಿಸಲಿದ್ದಾರೆ. ಅಧ್ಯಕ್ಷತೆಯನ್ನು ಸಭಾಪತಿ ಬಸವರಾಜ ಹೊರಟ್ಟಿ ವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಕರ್ನಾಟಕ ವಿಧಾನ ಸಭೆಯ ಸಭಾಧ್ಯಕ್ಷ ಯು.ಟಿ. ಖಾದರ, ಮುಖ್ಯ ಅತಿಥಿಗಳಾಗಿ ಗೃಹ ಸಚಿವ ಡಾ. ಜಿ.ಪರಮೇಶ್ವರ, ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ, ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಸಣ್ಣ ನೀರಾವರಿ ಸಚಿವ ಎನ್.ಎಸ್. ಬೋಸರಾಜ, ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಕರ್ನಾಟಕ ವಿಧಾನ ಸಭೆಯ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ ಸೇರಿದಂತೆ ಗಣ್ಯಮಾನ್ಯರು, ಹೊರಟ್ಟಿಯವರ ಹಿತೈಷಿಗಳು ಭಾಗವಹಿಸಲಿದ್ದಾರೆಂದು ಶ್ರೀ ಅನ್ನಪೂರ್ಣ ಕ್ರಿಯೇಶನ್ಸ್‌ನ ನಿರ್ದೇಶಕರು, ನಿರ್ಮಾಪಕರಾದ ಸಿರಿಗೇರಿ ಯರಿಸ್ವಾಮಿ ತಿಳಿಸಿದ್ದಾರೆ.

## ಡಿ.19ರಂದು ಗದಗ ತಾಲೂಕು ಮಟ್ಟದ ತ್ರೈಮಾಸಿಕ ಗ್ಯಾರಂಟಿ ಸಭೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕು ಮಟ್ಟದ ತ್ರೈಮಾಸಿಕ ಗ್ಯಾರಂಟಿ ಸಭೆಯನ್ನು ಡಿಸೆಂಬರ್ 19 ರಂದು ಬೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ಜರುಗುವ ಈ ಸಭೆಗೆ ಸಮಿತಿಯ ಸದಸ್ಯರು ಹಾಗೂ ವಿಶೇಷ ಆಹ್ವಾನಿತರು ಸಕಾಲದಲ್ಲಿ ಉಪಸ್ಥಿತರಿರಲು ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಸದಸ್ಯ ಕಾರ್ಯದರ್ಶಿಗಳು ಹಾಗೂ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತಲೆಕೆಳಗಾಗುತ್ತಿದೆ 'ಬೆಳೆವಿಮೆ' ವಂಚಕರ ಲೆಕ್ಕಾಚಾರ । ಈ ಗ್ರಾ.ಪಂ ಸದಸ್ಯನಿಗೀಗ ನಡುಕ

# 'ಬೆಳೆವಿಮೆ' ಬೃಹನ್ನಾಟಕದ ಸೂತ್ರಧಾರಿ ಯಾರು?!

■ ವಿಜಯಸಾಕ್ಷಿ ಸುದ್ದಿ, ಗದಗ

ರೈತರ ಅನುಕೂಲಕ್ಕಾಗಿ ಸರ್ಕಾರ ಜಾರಿಗೊಳಿಸಿದ ಬೆಳೆ ವಿಮೆ ಯೋಜನೆಯನ್ನೂ ಬಿಡದೇ, ರೈತರಿಗೂ, ಸರ್ಕಾರಕ್ಕೂ ಮೋಸ ಮಾಡುತ್ತಿರುವ ಘಟನೆಯ ಬಗ್ಗೆ ಇನ್ನಷ್ಟು ಮಾಹಿತಿಗಳು ಬಯಲಾಗತೊಡಗಿವೆ. ಅಖಂಡ ಧಾರವಾಡ ಜಿಲ್ಲೆಯಲ್ಲಿ ರೈತರ ಹೆಸರಿನಲ್ಲಿ ಈಗಾಗಲೇ ನಡೆದ, ನಡೆಯುತ್ತಿರುವ ಬೆಳೆವಿಮೆ ಪರಿಹಾರದ ಫಿಫ್ಟಿ-ಫಿಫ್ಟಿ ದಂಧೆಗೆ ಕಿಂಗ್‌ಪಿನ್ ಆಗಿರುವುದು ಗದಗ ಜಿಲ್ಲೆಯ ನರಗುಂದ ವಿಧಾನಸಭಾ ಕ್ಷೇತ್ರದ ಗ್ರಾಮ ಪಂಚಾಯಿತಿಯ ಓರ್ವ ಸದಸ್ಯ ಎಂದು ಹೇಳಲಾಗುತ್ತಿದೆ.

ಈ ಆಸಾಮಿ ನೂರಾರು ಎಕರೆ ಜಮೀನು ಹೊಂದಿದ್ದು, ಬೇರೆ ಬೇರೆ ತಾಲೂಕಿನ ಶ್ರೀಮಂತ ರೈತರೊಂದಿಗೆ ಕೈಜೋಡಿಸಿ ವಂಚನೆಯ ಜಾಲ ಬೀಸಿರುವ ಸಂಗತಿ ರಹಸ್ಯವಾಗಿಯೇನೂ ಉಳಿದಿಲ್ಲ. ಗದಗ ಶಹರದಲ್ಲಿನ ಯುವ ರಾಜ-ಕಾರಣಿ, ಅದೂ ಅಕ್ಕಿ ದಂಧೆಯ ರೂವಾರಿಯೊಬ್ಬ ಈ ಗ್ರಾಮ ಪಂಚಾಯಿತಿ ಸದಸ್ಯನ ಜೊತೆ-ಗೂಡಿ, ಕೋಟಿ ಕೋಟಿ ಹಣವನ್ನ ಲೂಟಿ ಹೊಡೆಯುತ್ತಿದ್ದಾರೆ. ಯಾರದ್ದೋ ದುಡ್ಡಿನಲ್ಲಿ ಜಾತ್ರೆ ಮಾಡುತ್ತ ಈ ಇಬ್ಬರೂ ಗದಗ ಜಿಲ್ಲೆಯಲ್ಲಿ ಐಷಾರಾಮಿ ಜೀವನ ನಡೆಸಲು ಮುಂದಾಗುತ್ತಿರುವುದು ಸಾರ್ವಜನಿಕರಿಗೆ ತಿಳಿಯದ ವಿಷಯವೇ?!

ಈಗಾಗಲೇ ಮುಂಗಾರು ಹಂಗಾಮಿನಲ್ಲಿ ಹೆಸರು ಬೆಳೆಗೆ ವಿಮೆ ಮಾಡಿಸಿದ ರೈತರು ಹವಾಮಾನ ವೈಪರಿತ್ಯ, ಕೀಟಬಾಧೆಯಿಂದ ಕೈಸುಟ್ಟುಕೊಂಡಿದ್ದಾರೆ. ಈಗಾಗಲೇ ವಂತಿಗೆ ತುಂಬಿದ ಬೆಳೆ ವಿಮೆ ಪರಿಹಾರದ ಹಣಕ್ಕಾಗಿ



ಚಾತಕ ಪಕ್ಷಿಯಂತೆ ಕಾಯತೊಡಗಿದ್ದಾರೆ. ಕೆಲವು ರಾಜಕಾರಣಿಗಳ ಬಾಲಂಗೋಚಿ ಹಿಡಿದುಕೊಂಡು ಧಾರವಾಡ ಜಿಲ್ಲಾಧಿಕಾರಿಗಳ ಮೂಲಕ ಸರಕಾರಿ ಸ್ವಾಮ್ಯದ ಏಜೆನ್ಸಿಗೆ ಪ್ರಸ್ತಾವನೆಯನ್ನು ಕೂಡಾ ಕಳಿಸಲಾಗಿದೆ ಎನ್ನಲಾಗಿದೆ.

ಆದರೆ, ಇಲ್ಲಿ ನಡೆದಿರುವ ಬೃಹನ್ನಾಟಕವನ್ನು ಬಯಲಿಗೆಳೆಯುವ ವಿಡಿಯೋಗಳು ಸಂಬಂಧಿಸಿದ ಅಧಿಕಾರಿಗಳ ಬಳಿಯಿವೆ ಎಂದು ಹೇಳಲಾಗುತ್ತದೆ.

ಚಳಿಗಾಲದ ಅಧಿವೇಶನ ಮುಗಿದ ತಕ್ಷಣವೇ ಗದಗ ಜಿಲ್ಲೆಯ ಮಾಜಿ ಶಾಸಕರನ್ನು ಕರೆದುಕೊಂಡು ಬೆಂಗಳೂರಿನಲ್ಲಿ ವ್ಯವಹಾರ ಮುಗಿಸಿ ಕೈತೊಳೆದು ಶುದ್ಧವಾಗುವ ಯೋಜನೆ ಹೂಡಿರುವ ವಂಚಕರಿಗೆ ಸಾವಿರಾರು ರೈತರ ಹಿಡಿಶಾಪ ತಟ್ಟಲಾರದೇ ಬಿಟ್ಟೀತಾ?!

ಮುಂಗಾರು ಹಂಗಾಮಿನ ಬೆಳೆ ವಿಮೆ ತುಂಬಿದ ನಂತರ ತಪಾಸಣೆಗೆ ಬರುವ ತಂಡದ ಮುಂದೆ 'ಬೆಳೆ ಹಾಳಾಗಿದೆ' ಎಂದು ತೋರಿಸಲು ರಾತ್ರೋರಾತ್ರಿ ಹೆಸರು ಕಾಯಿ ಬಿಡಿಸಿರುವ ಕುರಿತು ದಾಖಲೆಗಳು ಸೇರಬೇಕಾದ ಜಾಗ ಸೇರಿವೆ. ಈ ಕಾರಣದಿಂದಲೇ ಇದುವರೆಗೂ ಮುಂಗಾರಿನ ಬೆಳೆ ವಿಮೆ ಹಣ ಬರುತ್ತಿಲ್ಲ.

ತಾನೊಂದು ಬಗೆದರೆ ದೈವ ಬೇರೆಯದೇ ದಾರಿ ಹುಡುಕಿತು ಎಂಬಂತಾಗಿದೆ ಈ ವಂಚಕರ ಪರಿಸ್ಥಿತಿ. ಇದೇ ಕಾರಣಕ್ಕಾಗಿ, ರೈತರ ಹೆಸರಿನಲ್ಲಿ ಅಪಾರ ಹಣ ಲೂಟಿ ಹೊಡೆಯುವ ಕನಸು ಕಂಡಿದ್ದ ಮೋಸಗಾರರು ವಿಲವಿಲ ಒದ್ದಾಡುತ್ತಿರುವ ವಿಷಯ ಗುಟ್ಟಾಗಿ ಉಳಿದಿಲ್ಲ.



### ಪ್ರಾಥಮಿಕ ಶಾಲೆಗಳ ಮುಖ್ಯ ಶಿಕ್ಷಕರ ಸಭೆಯಲ್ಲಿ ಬಿಇಓ ಎಚ್.ಎನ್.ನಾಯಕ್ ಕರೆ

# ವಿದ್ಯಾರ್ಥಿಗಳಿಗೆ ಸೌಲಭ್ಯಗಳನ್ನು ತಲುಪಿಸುವ ಕಾರ್ಯವಾಗಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರಕಾರಗಳು ಸಾಕಷ್ಟು ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸುತ್ತಿವೆ. ವಿದ್ಯಾರ್ಥಿಗಳಿಗೆ ಅನೇಕ ಯೋಜನೆಗಳನ್ನು ಜಾರಿಗೆ ತಂದಿವೆ. ವಿದ್ಯಾರ್ಥಿಗಳಿಗೆ ತಲುಪಬೇಕಾದ ಎಲ್ಲಾ ಸೌಲಭ್ಯಗಳನ್ನು ತಪ್ಪದೇ ತಲುಪಿಸಲು ಶಿಕ್ಷಕರು ಆದ್ಯತೆ ನೀಡಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ಎನ್. ನಾಯಕ್ ತಿಳಿಸಿದರು.

ಅವರು ಮಂಗಳವಾರ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಭವನದಲ್ಲಿ ಲಕ್ಷ್ಮೇಶ್ವರ ತಾಲೂಕಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಶಾಲೆಗಳ ಮುಖ್ಯ ಶಿಕ್ಷಕರ ಸಭೆಯಲ್ಲಿ ಮಾತನಾಡಿದರು.

ಸಭೆಯಲ್ಲಿ ಇಸಿಓ ಹಾಗೂ ಬಿಆರ್‌ಪಿಗಳು ಇಲಾಖೆಗೆ ಸಂಬಂಧಪಟ್ಟ ಆಧಾರ್ ತಿದ್ದುಪಡಿ, ಅಪಾರ ನೊಂದಣಿ ಹಾಗೂ ಶೈಕ್ಷಣಿಕ ಚಟುವಟಿಕೆಗಳನ್ನು ಅನುಷ್ಠಾನಗೊಳಿಸುವ ಕುರಿತು ಮಾರ್ಗದರ್ಶನ ಮಾಡಿದರು.



ಈ ಸಂದರ್ಭದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಬಿ.ಎಸ್. ಭಜಂತ್ರಿ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಉಪಾಧ್ಯಕ್ಷ ಎಮ್. ಎಸ್. ಹಿರೇಮಠ, ಕಾರ್ಯದರ್ಶಿ ಚಂದ್ರಕಾಂತ ನೇಕಾರ, ಎಲ್.ಎ. ನಂದೆಣ್ಣವರ, ಬಿ.ಬಿ. ಯತ್ನಳ್ಳಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಖಜಾಂಚಿ ಎಮ್.ಡಿ. ವಾರದ, ನಿರ್ದೇಶಕರಾದ ಬಿ.ಎಮ್. ಯರಗುಪ್ಪಿ, ಆಯ್.ಎಸ್. ಮೆಡ್ಲೇರಿ, ಉಮೇಶ ಹುಚ್ಚಯ್ಯಮಠ, ಹರೀಶ್ ಸೇಂದ್ರಗಯಾ, ಆಯ್.ಬಿ. ಜಕ್ಕನಗೌಡರ, ನಿಕಟಪೂರ್ವ ಅಧ್ಯಕ್ಷ ಡಿ.ಎಚ್. ಪಾಟೀಲ ಸೇರಿದಂತೆ ಲಕ್ಷ್ಮೇಶ್ವರ ತಾಲೂಕಿನ ಎಲ್ಲಾ ಸಿಆರ್‌ಪಿ, ಬಿಆರ್‌ಪಿ, ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರು ಹಾಜರಿದ್ದರು.

ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಶಿಕ್ಷಕರ ಸಹಕಾರ ಇರಬೇಕು. ಸರಕಾರದ ಯೋಜನೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮತ್ತು ಅವರ ಪಾಲಕರಿಗೆ ತಿಳಿಸಿ ಹೇಳುವದ ಜೊತೆಗೆ ಪ್ರತಿಯೊಬ್ಬರಿಗೂ ಅವುಗಳು ತಲುಪುವಂತೆ ಮಾಡುವದು ಅತಿ ಮುಖ್ಯವಾಗಿದೆ. ಶಿಕ್ಷಣದ ಗುಣಮಟ್ಟವನ್ನು ಕಾಯ್ದುಕೊಳ್ಳುವದು ಅವಶ್ಯ ಎನ್ನುವದನ್ನು ಶಿಕ್ಷಕರು ಅರಿತುಕೊಳ್ಳಬೇಕು. ಪ್ರಾಥಮಿಕ ಹಂತದಲ್ಲಿ ಮಕ್ಕಳಿಗೆ ಉತ್ತಮ ಅಡಿಪಾಯ ದೊರೆತಲ್ಲಿ ಅವರ ಭವಿಷ್ಯ ಉತ್ತಮವಾಗಿ ರೂಪಗೊಳ್ಳುತ್ತದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ್ ಹೇಳಿದರು.

# ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆಗೆ ಅವಕಾಶ ನೀಡಬೇಡಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಉತ್ತರ ಕರ್ನಾಟಕದ ಸಹ್ಯಾದ್ರಿ ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆಗೆ ಅವಕಾಶ ನೀಡಬಾರದು ಎಂದು ಲಕ್ಷ್ಮೇಶ್ವರ ತಾಲೂಕಾ ವೈದ್ಯರ ಸಂಘದಿಂದ ತಹಸೀಲ್ದಾರರ ಮೂಲಕ ಜಿಲ್ಲಾಧಿಕಾರಿಗಳಿಗೆ ಮಂಗಳವಾರ ಮನವಿ ಅರ್ಪಿಸಲಾಯಿತು.

ಮನವಿಯಲ್ಲಿ, ಗದಗ ಜಿಲ್ಲೆಯ ಕಪ್ಪತಗುಡ್ಡದ ವಿಶಾಲವಾದ ಪ್ರದೇಶದಲ್ಲಿ ಅಪರೂಪದ ನೂರಾರು ಜಾತಿಯ ಪ್ರಾಣಿ-ಪಕ್ಷಿಗಳು, ಸರೀಸೃಪಗಳು ಹಾಗೂ 500ಕ್ಕೂ ಹೆಚ್ಚು ಔಷಧೀಯ ಸಸ್ಯರಾಶಿಯೂ ಇದ್ದು, ಸದ್ಯ ವನ್ಯಜೀವಿಧಾಮದ ಕಾನೂನು ಪ್ರಕಾರ ಸಂರಕ್ಷಿತ ಜೀವ ವೈವಿಧ್ಯತಾ ತಾಣವನ್ನಾಗಿ ವಿಸ್ತರಿಸುವುದು ಮತ್ತು ಅದರ ಪರಿಧಿಯ 10 ಕಿ.ಮೀ ವ್ಯಾಪ್ತಿಯಲ್ಲಿ ಯಾವುದೇ ಗಣಿಗಾರಿಕೆ ಕೈಗೊಳ್ಳದಂತೆ ನಿಷೇಧಿಸಲು ಕ್ರಮ ಕೈಗೊಳ್ಳಬೇಕು. ಕಪ್ಪತ್ತಗುಡ್ಡದಲ್ಲಿ ಮತ್ತೆ ಗಣಿಗಾರಿಕೆಗೆ ಅನುಮತಿ ನೀಡಲು ಸಂಚು ನಡೆದಿದ್ದು, ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಕಪ್ಪತಗುಡ್ಡ ವನ್ಯಜೀವಿಧಾಮದ 10 ಕಿ.ಮೀ ವ್ಯಾಪ್ತಿಯಲ್ಲಿ ಯಾವುದೇ ಗಣಿಗಾರಿಕೆ ಕೈಗೊಳ್ಳದಂತೆ ನಿಷೇಧಿಸುವ ಕುರಿತು ರಾಜ್ಯ ಸರ್ಕಾರ ತಕ್ಷಣ ನಿರ್ಧಾರ ಕೈಗೊಳ್ಳಬೇಕು. ಸಾವಿರಾರು ಬಗೆಯ ಖನಿಜಗಳು ಕಪ್ಪತಗುಡ್ಡದ ಗರ್ಭದಲ್ಲಿದ್ದು, ಅದನ್ನು ರಕ್ಷಿಸುವ ನಿಟ್ಟಿನಲ್ಲಿ ಸರಕಾರ ದಿಟ್ಟ ಹೆಜ್ಜೆ ಇಡುವ ಮೂಲಕ ಯಾವುದೇ ಬಂಡವಾಳಶಾಹಿಗಳ ಒತ್ತಡಕ್ಕೆ ಮಣಿಯಬಾರದು ಎಂದು ಮನವಿಯಲ್ಲಿ ವಿನಂತಿಸಿದರು.

ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ತಾಲೂಕಾ ವೈದ್ಯರ ಸಂಘದ ಅಧ್ಯಕ್ಷ ಡಾ. ಪಿ.ಡಿ. ತೋಟದ, ಹಿರಿಯ ವೈದ್ಯರಾದ ಡಾ. ಎಸ್.ಜಿ. ಹೂವಿನ್, ಡಾ. ಎಂ.ಆರ್. ಕಲಿವಾಳಮಠ, ಉಪಾಧ್ಯಕ್ಷ ಡಾ. ಎನ್.ಎಂ. ವಾಲಿ, ಕಾರ್ಯದರ್ಶಿ ಡಾ. ವಿ.ಎನ್. ಹೊನ್ನಿಕೊಪ್ಪ, ಡಾ. ಪ್ರಸನ್ನಕುಲಕರ್ಣಿ, ಡಾ. ಎ.ಎಚ್. ಅಮರಶೆಟ್ಟಿ, ಡಾ. ಎಂ.ಆರ್. ಗೋಣೆಪ್ಪನವರ, ಡಾ. ಎಸ್. ಎಂ. ಬಿಂಕದಕಟ್ಟಿ, ನಾಗರಾಜ ಕಳ್ಳಿಮನಿ ಮುಂತಾದವರಿದ್ದರು.

# ಸಂಘಟಿತವಾಗಿ ಹೋರಾಟ ಮಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಅನುದಾನಿತ ಶಾಲಾ-ಕಾಲೇಜುಗಳ ಪಿಂಚಣಿ ವಂಚಿತ ನೌಕರರ ಸಂಘದ ಗದಗ ಜಿಲ್ಲಾ ಘಟಕ ವತಿಯಿಂದ ಬೆಳಗಾವಿ ಅಧಿವೇಶನದಲ್ಲಿ ಹಳೆ ಪಿಂಚಣಿ ಜಾರಿ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಸರ್ಕಾರವನ್ನು ಒತ್ತಾಯಿಸಿ ಬೆಳಗಾವಿಯ ಸುವರ್ಣಸೌಧದ ಎದುರು ನಡೆಯಲಿರುವ ಪ್ರತಿಭಟನೆಗೆ ನಗರದ ಮುಳಗುಂದ ನಾಕಾದಿಂದ ಗದಗ ಜಿಲ್ಲೆಯ ಎಲ್ಲ ತಾಲೂಕಗಳ ನೌಕರರು ಬೆಳಗಾವಿಗೆ ತೆರಳಿದರು.

ಈ ಸಂದರ್ಭದಲ್ಲಿ ಕನಕದಾಸ ಶಿಕ್ಷಣ ಸಮಿತಿಯ ಕಾರ್ಯದರ್ಶಿ ರವಿ ದಂಡಿನ ಮಾತನಾಡಿ,



ಶಿಕ್ಷಕರ ಬೇಡಿಕೆಗಳಿಗೆ ವಿವಿಧ ಸಂಘಟನೆಗಳು ಬೆನ್ನೆಲುಬಾಗಿ ನಿಂತಿರುವುದು ಶ್ಲಾಘನೀಯ. ಪಿಂಚಣಿ ವಂಚಿತರ ಬೆಳಗಾವಿ ಚಲೋ ಕಾರ್ಯಕ್ರಮದ ಮೂಲಕ ಶಿಕ್ಷಕರ ಜ್ವಲಂತ ಸಮಸ್ಯೆಗಳು ಈಡೇರುವಂತೆ ಸಂಘಟಿತವಾಗಿ ಹೋರಾಟ ಮಾಡಿ ಎಂದು ಕರೆ ನೀಡಿದರು.

ರಾಜ್ಯಾಧ್ಯಕ್ಷ ಜಿ ಹನುಮಂತಪ್ಪ, ರಾಜ್ಯ ಉಪಾಧ್ಯಕ್ಷ ಈರಣ್ಣ ಹಾದಿಮನಿ, ಜಿಲ್ಲಾಧ್ಯಕ್ಷ ಬಸವರಾಜ ಕೊರ್ಲಹಳ್ಳಿ, ಗೌರವಾಧ್ಯಕ್ಷ ವಿ.ಕೆ. ಕೊಳ್ಳಿ, ಪ್ರಮುಖರಾದ ಎಂ.ಕೆ. ಲಮಾಣಿ, ರವಿ ಕೋಟಿಯವರ, ವಿ.ಎಂ. ಕುಂದ್ರಳ್ಳಿ, ಎಸ್.ಎಸ್. ಚಿಕ್ಕೊಪ್ಪ, ರೇಣುಕಾಮಠ, ಎಚ್.ಪಿ. ಹಡಪದ, ಎಸ್.ಎಸ್. ಚಿಕ್ಕಮಠ, ಬಿ.ಎ. ಹೂಗಾರ, ಉಮೇಶ ಹಿರೇಮಠ, ಸತೀಶ ಪಾಸಿ, ಎಸ್.ವ್ಹಿ. ಡಾಣಾಕ್ಶಗರ, ಬಿ.ಐ. ಗಿಂಡಿಮಠ, ಎಂ.ಸಿ. ಗುಳೇದ, ಝಡ್ ಎಂ.ಖಾಜಿ, ಎಸ್.ಎಂ. ಅಂಗಡಿ, ಧನಷು ನಾಯ್ಕು, ಬಿ.ಎಸ್. ಬಸನಗೌಡ, ಸಿ.ವಾಯ್. ಚನ್ನಪ್ಪಗೌಡ್ರ, ಆರ್. ನಾಗರಾಜ, ಡಾ. ರಾಜಶೇಖರ ಕನಕರಡ್ಡಿ, ಎಸ್.ಕೆ. ವಂಡಕರ, ಬಿ.ಕೆ. ಕಟ್ಟಿಮನಿ ಸೇರಿದಂತೆ ಎಲ್ಲಾ ತಾಲೂಕುಗಳ ಪದಾಧಿಕಾರಿಗಳು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ತೆರಳಿದರು.

## ಸಂಪಾದಕೀಯ

# ಪ್ರತಿಪಕ್ಷ ನಾಯಕನ ವೈಫಲ್ಯ?

ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನ ಕೊನೆಯ ಹಂತಕ್ಕೆ ಬಂದಿದೆ. ಇನ್ನೆರಡು ದಿನದಲ್ಲಿ ಅಧಿವೇಶನಕ್ಕೆ ತೆರೆ ಬೀಳಲಿದ್ದು, ಅದಾದ ನಂತರ ಮುಖ್ಯಮಂತ್ರಿ ಆದಿಯಾಗಿ ಸಚಿವ ಸಂಪುಟದ ಸಚಿವರು ಮಂಡ್ಯದಲ್ಲಿ ನಡೆಯುವ ಸಾಹಿತ್ಯ ಸಮ್ಮೇಳನದತ್ತ ಮುಖ ಮಾಡಲಿದ್ದಾರೆ.

ಆದರೆ ಅಧಿವೇಶನದಲ್ಲಿ ಆಗಿದ್ದೇನು ಎನ್ನುವ ಬಗ್ಗೆ ಅವಲೋಕನ ನಡೆಸಿದರೆ, ಕಾಟಾಚಾರಕ್ಕೆ ಅಧಿವೇಶನ ನಡೆದಿದೆ ಎನ್ನುವಂತಾಗಿದೆ. ಪ್ರತಿಭಟನಾ ನಿರತ ಪಂಚಮಸಾಲಿ ಸಮಾಜದ ಮೇಲೆ ಲಾಠಿ ಚಾರ್ಜ್ ನಡೆದ ಘಟನೆ ಸದನದಲ್ಲಿ ಪ್ರತಿಧ್ವನಿಸಿದ್ದು ಬಿಟ್ಟರೆ ನೆನಪಿನಲ್ಲಿ ಉಳಿಯುವ ಯಾವುದೇ ಸಂಗತಿಗಳು ಇಲ್ಲ.

ಇನ್ನು ಸರಕಾರವನ್ನು ತೀವ್ರವಾಗಿ ತರಾಟೆಗೆ ತೆಗೆದು-ಕೊಂಡು ಜನರ ಸಮಸ್ಯೆಗಳಿಗೆ ಧ್ವನಿಯಾಗಬೇಕಿದ್ದ ಪ್ರತಿಪಕ್ಷ ಬಣ ಜಗಳದಿಂದ ಬಸವಳಿದು ಮೂಲೆ ಸೇರಿದೆ. ಆರ್. ಅಶೋಕ ಪ್ರತಿಪಕ್ಷ ನಾಯಕರಾಗಿ ತಮ್ಮ ಕಾರ್ಯವನ್ನು ಸಮರ್ಥವಾಗಿ ನಿಭಾಯಿಸಿಲ್ಲ ಎಂದು ಬಿಜೆಪಿ ಸದಸ್ಯರೆ ಆರೋಪಿಸುತ್ತಿದ್ದಾರೆ. ಸದನ ನಡೆಯುತ್ತಿರುವ ಸಂದರ್ಭದಲ್ಲಿ ಪ್ರತಿಪಕ್ಷ ನಾಯಕನ ವಿರುದ್ಧ ಅಸಮಾಧಾನ ಸ್ಫೋಟಗೊಂಡಿರುವುದು ಪ್ರತಿಪಕ್ಷದಲ್ಲಿ ಎಲ್ಲವೂ ಸರಿಯಿಲ್ಲ ಎನ್ನುವುದನ್ನು ತೋರಿಸುತ್ತದೆ.

ಪ್ರತಿಪಕ್ಷ ನಾಯಕ ಮತ್ತು ಪ್ರತಿಪಕ್ಷದ ಸದಸ್ಯರ ನಡೆಯಿಂದಾಗಿ ಸರಕಾರ ಕೇವಲ ಅಧಿವೇಶನವನ್ನು ಮಾತ್ರವಲ್ಲ, ಪ್ರತಿಪಕ್ಷವನ್ನೂ ಸರಿಯಾಗಿ ನಿಭಾಹಿಸಿ, ಮತ್ತಷ್ಟು ಬಲಾಢ್ಯಗೊಂಡಿದೆ. ಸದನದ ಆರಂಭದಿಂದ ಈವರೆಗೆ ಸರಕಾರವನ್ನು ಸಮರ್ಥವಾಗಿ ಟೀಕಿಸುವ, ಇಕ್ಕಟ್ಟಿಗೆ ಸಿಲುಕಿಸುವ ಯಾವುದೇ ಪ್ರಸಂಗ ಎದುರಾಗಿಲ್ಲ.

ಸರಕಾರಕ್ಕೆ ಚಾಟಿ ಬೀಸಲು ಅನೇಕ ವಿಷಯಗಳಿದ್ದವು. ಸೂಕ್ಷ್ಮ ಸಮಸ್ಯೆಗಳಿದ್ದವು. ಆದರೆ ಸಮರ್ಥ ನಾಯಕತ್ವ ಕೊರತೆಯಿಂದ ಪ್ರತಿಪಕ್ಷ ಸಮರ್ಥವಾಗಿ ಕೆಲಸ ಮಾಡಲು ಸಾಧ್ಯವಾಗಿಲ್ಲ. ಸದ್ಯ ಬಿಜೆಪಿಗೆ ಅತ್ಯುತ್ತಮ ಸಂಸದೀಯ ಪಟುಗಳ ಕೊರತೆ ಕಾಡುತ್ತಿದೆ. ರಾಜ್ಯಕ್ಕೂ ಪ್ರತಿಪಕ್ಷದ ಕೊರತೆ ಕಾಡುತ್ತಿದೆ.

**ಕೊಟ್ಟೂರೇಶ್ವರ ಮಠದಲ್ಲಿ ಬಸವ ಪುರಾಣ ಮುಕ್ತಾಯ, ವೈಚಾರಿಕ ಗ್ರಂಥಗಳ ಬಿಡುಗಡೆ**

# ಬಸವಣ್ಣನವರ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ದುಡಿಮೆ ಪ್ರಾಮಾಣಿಕವಾಗಿದ್ದರೆ ಮಾತ್ರ ಕಾಯಕವಾಗುತ್ತದೆ. ಈ ಪ್ರಾಮಾಣಿಕ ಕಾಯಕದಿಂದಲೇ ಕೈಲಾಸ ಕಾಣಬಹುದು ಎಂದು 12ನೇ ಶತಮಾನದಲ್ಲಿ ಬಸವಣ್ಣನವರು ಕಾಯಕಕ್ಕೆ ಮಹತ್ವ ನೀಡಿ ಸಮಾಜಮುಖಿಗಳಾಗಿದ್ದಾರೆ. ಈ ದಿಸೆಯಲ್ಲಿ ಬಸವಣ್ಣನವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೊಸಳ್ಳಿ ಬೂದೀಶ್ವರ ಸಂಸ್ಥಾನಮಠದ ಬೂದೀಶ್ವರ ಸ್ವಾಮಿಗಳು ಹೇಳಿದರು.

ಇಲ್ಲಿಯ ಸಮೀಪದ ಹರ್ಲಾಪೂರ ಕೊಟ್ಟೂರೇಶ್ವರ ಮಠದಲ್ಲಿ ನಮ್ಮೂರ ಲಕ್ಷ ದೀಪೋತ್ಸವದಂಗವಾಗಿ ಹಮ್ಮಿಕೊಂಡಿದ್ದ ಬಸವ ಪುರಾಣ ಮಂಗಲ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

12ನೇ ಶತಮಾನದಲ್ಲಿದ್ದ ಬಹುತೇಕ ಶರಣರು ಪ್ರಾಮಾಣಿಕ ಕಾಯಕಕ್ಕೆ ಮಹತ್ವ ನೀಡಿದ್ದರು. ಬಸವಣ್ಣನವರು ತಮ್ಮ ವಚನದಲ್ಲಿ ಕಾಯಕದ ಬಗ್ಗೆ ಹೆಚ್ಚು ವಿಶ್ಲೇಷಿಸಿದ್ದಾರೆ. ದುಡಿಯದೇ ತಿನ್ನುವ ಹಕ್ಕು ಈ ಸಮಾಜದಲ್ಲಿ ಯಾರಿಗೂ ಇಲ್ಲ. ಅನ್ಯಾಯ, ಅಧರ್ಮದಿಂದ ದುಡಿದ ಹಣ ಪಾಪಕ್ಕೆ ಸಮಾನವಾಗುತ್ತದೆ. ಆದ್ದರಿಂದ ಬಸವನೆಂದರೆ ನೀತಿ, ದಾಸೋಹ, ಬದುಕು, ಉಸಿರು, ಧರ್ಮವಾಗಿದ್ದು



ಬಸವ ತತ್ವಗಳನ್ನು ಅಳವಡಿಸಿಕೊಳ್ಳಬೇಕೆಂದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರು ಮಾತನಾಡಿ, ಆದರ್ಶ, ಮಾನವೀಯ ಮೌಲ್ಯಗಳು ನಶಿಸುತ್ತಿರುವ ಇಂದಿನ ದಿನಗಳಲ್ಲಿ ಕೊಟ್ಟೂರೇಶ್ವರ ಶ್ರೀಗಳು ಬಸವ ತತ್ವಗಳನ್ನು ಪುರಾಣದ ಮೂಲಕ ಬಿತ್ತರಿಸಿ ನ್ಯಾಯ-ನೀತಿಗಳನ್ನು ಪುನರ್ ಸ್ಥಾಪಿಸುತ್ತಿರುವ ಈ ಕಾರ್ಯ ಶ್ಲಾಘನೀಯವಾಗಿದೆ. ಕತ್ತಲೆಯನ್ನು ಕಳೆದು ಬೆಳಕು ಚೆಲ್ಲುವ ಈ ಲಕ್ಷ ದೀಪೋತ್ಸವ ಕಾರ್ಯಕ್ರಮದಿಂದ ಆರೋಗ್ಯ, ಆರ್ಥಿಕತೆ, ಸಂಕಷ್ಟಗಳು ದೂರವಾಗುತ್ತಿವೆ ಎಂದರು.

ಶಿರಹಟ್ಟಿ ಶಾಸಕ ಚಂದ್ರು ಲಮಾಣಿ ಮಾತನಾಡಿ, ಬಸವಣ್ಣನವರ ವಚನಗಳು ವಿದ್ಯಾರ್ಥಿಗಳಿಗೆ ಚಿರಪರಿಚಿತವಾಗಿವೆ. ಆದರೆ ಮೊಬೈಲ್ ಗೀಳಿನಿಂದ ಶೇ 95ರಷ್ಟು ಯುವಕರು ಮತ್ತು ವಿದ್ಯಾರ್ಥಿಗಳು ದುಶ್ಚಟದ ದಾಸರಾಗುತ್ತಿರುವುದನ್ನು ತಪ್ಪಿಸಲು ಬಸವಣ್ಣನವರ ತತ್ವಾದರ್ಶಗಳ ಮೂಲಕ ಪಾಲಕರು ಸಂಸ್ಕಾರ ನೀಡಬೇಕು ಎಂದರು.

ಡಾ. ಕೊಟ್ಟೂರೇಶ್ವರ ಶ್ರೀಗಳು ಮಾತನಾಡಿ, ನಮ್ಮೂರ ಲಕ್ಷ ದೀಪೋತ್ಸವ ಕಾರ್ಯಕ್ಕೆ ಸಹಾಯ ಸಹಕಾರ ನೀಡಿದ ಭಕ್ತರ ಕಾರ್ಯ ಶ್ಲಾಘನೀಯವಾಗಿದ್ದು, ಗ್ರಂಥವನ್ನು ಪ್ರಕಟ ಮಾಡಲು ಸಹಾಯ ಧನ ನೀಡಿದ ಬೆಂಗಳೂರು ಮಿರಾಂಡ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಪ್ರೊ. ಎಸ್.ಎನ್. ಕಾತರಕಿ ಅವರ ಸಮಾಜಮುಖಿ ಕಾರ್ಯ ಅಭಿನಂದನಾರ್ಹವಾಗಿದೆ ಎಂದರು.

ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದ ಗೌಡ ಪಾಟೀಲ ಮಾತನಾಡಿ, ವಚನಗಳ ತಳಹದಿಯನ್ನು ಅಧ್ಯಯನ ಮಾಡಿ ಸಾಮಾನ್ಯ ಜನರಿಗೆ ಅರ್ಥವಾಗುವಂತೆ ಗ್ರಂಥವನ್ನು ರಚನೆ ಮಾಡಿ ಈ ಸಮಾಜಕ್ಕೆ ನೀಡಿದ ಕೊಟ್ಟೂರೇಶ್ವರ ಶ್ರೀಗಳು ಕಾರ್ಯ ಸ್ತುತ್ಯಾರ್ಹ ಎಂದರು.

> ಡಾ ಬಿ.ಆರ್. ಅಂಬೇಡ್ಕರರು ಬರೆದ ಭಾರತದ ಸಂವಿದಾನದಲ್ಲಿ ಬಸವಣ್ಣನವರ ತತ್ವಗಳು ಅಡಗಿವೆ. ಹೀಗಾಗಿ ಸುವರ್ಣ ಸೌಧ ಮತ್ತು ದೆಹಲಿಯ ಸಂಸತ್ ಭವನದಲ್ಲಿ ಬಸವಣ್ಣನವರ ಅನುಭವ ಮಂಟಪದ ಚಿತ್ರ ಬಿಡಿಸಲಾಗಿದೆ.
> **– ಡಾ. ಶೇಖರ ಸಜ್ಜನರ, ಖ್ಯಾತ ವೈದ್ಯರು-ಗದಗ.**

> ಡಾ. ಕೊಟ್ಟೂರೇಶ್ವರರು ರಚಿಸಿದ 'ವಚನಕಾರರ ದೃಷ್ಟಿಯಲ್ಲಿ ಸಮಾನತೆ ಮತ್ತು ವೈಚಾರಿಕತೆ' ಎಂಬ ಸಂಶೋಧನಾ ಗ್ರಂಥವು ಘನತೆ ಮತ್ತು ಗೌರವದಿಂದ ಕೂಡಿದ್ದು, ಪಿ.ಎಚ್.ಡಿ ಪದವಿಯ ಪಾವಿತ್ರ್ಯತೆ ಹೊಂದಿ, ಜನರಲ್ಲಿ ವಿಶ್ವಾಸವನ್ನು ಮೂಡಿಸುವಲ್ಲಿ ಯಶಸ್ವಿಯಾಗಿದೆ.
> **– ಡಾ. ಶರಣಬಸವ ವೆಂಕಟಾಪೂರ. ಗ್ರಂಥ ಮಾರ್ಗದರ್ಶಕರು.**

21 ದಿನ ಬಸವ ಪುರಾಣ ಪ್ರವಚನ ಮಾಡಿದ ಹಾವಲಿಂಗೇಶ್ವರ ಹಿರೇಮಠದ ಶಾಂತವೀರ ಶಿವಾಚಾರ್ಯರು ಬಸವಣ್ಣನವರು ಜಾತಿ, ಮೂಢನಂಬಿಕೆ, ನಿರ್ಮೂಲನೆಗಾಗಿ ಮಾಡಿದ ಕ್ರಾಂತಿಕಾರಕ ಬದಲಾವಣೆ ಮತ್ತು ಅವರು ಐಕ್ಯವಾದ ಚರಿತ್ರೆಯ ಕುರಿತು ವಿವರಿಸಿ ಪುರಾಣವನ್ನು ಮಂಗಲಗೊಳಿಸಿದರು.

ಡಾ. ಕೊಟ್ಟೂರೇಶ್ವರ ಶ್ರೀಗಳು ರಚನೆ ಮಾಡಿದ 'ವಚನಕಾರರ ದೃಷ್ಟಿಯಲ್ಲಿ ಸಮಾನತೆ ಮತ್ತು ವೈಚಾರಿಕತೆ' ಮತ್ತು ಮಳಖೇಡದ ಶ್ರೀಗಳು ರಚಿಸಿದ 'ಜಗದ ಜಗದೀಶ್ವರ' ಎಂಬ ಗ್ರಂಥಗಳನ್ನು ಡಾ. ಶೇಖರ ಸಜ್ಜನ ಅವರು ಬಿಡುಗಡೆಗೊಳಿಸಿದರು.

ಮಹಾಲಿಂಗಪೂರದ ಚನ್ನವೀರ ಶ್ರೀಗಳು, ಮಳಖೇಡದ ಕೊಟ್ಟೂರೇಶ್ವರ ಶಿವಾಚಾರ್ಯರು, ಜಾಕನಪಲ್ಲಿಯ ಗವಿಶಿದ್ಧಲಿಂಗ ಶ್ರೀಗಳು, ಕೊಟ್ರಯ್ಯಶಾಸ್ತ್ರಿಗಳು ನರಗುಂದಮಠ, ರವಿ ದಂಡಿನ, ವೆಂಕರೆಡ್ಡಿ ಕೊಳ್ಳಿ, ಸಿದ್ದು ಆಲೂರು, ಕೆ.ಎಸ್. ಕೊಡ್ಲಿವಾಡ, ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ ವೇದಿಕೆಯಲ್ಲಿದ್ದರು. ಕೆ.ಬಿ. ಕೊಣ್ಣೂರು ಸ್ವಾಗತಿಸಿದರು. ವೆಂಕಟೇಶ ಜುಂಜಣಿ ನಿರೂಪಿಸಿದರು. ರಾಮಣ್ಣ ಬೆಳಧಡಿ ವಂದಿಸಿದರು.

# ನಾನೇಶ್ವರಿ ಮುಟಗಾರಗೆ 'ಕಲಾಗೌರವ' ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಕಲಾರತ್ನಂ ಫೌಂಡೇಶನ್ ಆಫ್ ಆರ್ಟ್ ಸೊಸೈಟಿ ಕೆಎಫ್‌ಓಎಎಸ್ ಉತ್ತರಪ್ರದೇಶ ಇವರ ಸಂಯುಕ್ತ ಆಶ್ರಯದಲ್ಲಿ ಅಂತಾರಾಷ್ಟ್ರೀಯ ಚಿತ್ರಕಲಾ ಸ್ಪರ್ಧೆ ಹಮ್ಮಿಕೊಂಡಿತ್ತು.

ಈ ಚಿತ್ರಕಲಾ ಸ್ಪರ್ಧೆಯಲ್ಲಿ ಗದಗ ಬೆಟಗೇರಿಯ ಎಸ್‌ಎಸ್‌ಕೆ ಶ್ರೀ ಜಗದಂಬಾ ಶಿಕ್ಷಣ ಸಮಿತಿಯ ಎಲ್.ಎನ್. ಬದಿ ಆಂಗ್ಲ ಮಾಧ್ಯಮ ಪ್ರೌಢಶಾಲೆಯ 9ನೇ ತರಗತಿಯ ವಿದ್ಯಾರ್ಥಿನಿ ನಾನೇಶ್ವರಿ ಮುಟಗಾರ ರಾಧಾಕೃಷ್ಣ ವಿಷಯದ ಮೇಲೆ ತೈಲ ಮಾಧ್ಯಮದಿಂದ ರಚಿಸಿದ ಕೃಷ್ಣ ಲೀಲೆ ಎಂಬ ಚಿತ್ರಕ್ಕೆ ಕಲಾ ಗೌರವ ಸನ್ಮಾನವನ್ನು ಪಡೆದಿದ್ದಾಳೆ. ಪ್ರಾಥಮಿಕ ವಿಭಾಗದಲ್ಲಿ ಪ್ರಥಮ ವರಕಲ್, ಕನಿಷ್ಕ ಕಬಾಡಿ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ತರಬೇತಿ ನೀಡಿದ ಕಲಾವಿದ ಡಾ. ಜಾಕೀರಹುಸೇನ ಕೊರ್ಲಹಳ್ಳಿ ಅವರಿಗೆ ಹಾಗೂ ವಿದ್ಯಾರ್ಥಿಗಳಿಗೆ ಶಿಕ್ಷಣ ಸಂಸ್ಥೆಯ ಚೇರಮನ್ ಗೋವಿಂದರಾಜ ವಿ.ಬಸವಾ, ವೈಸ್ ಚೇರಮನ್ ದತ್ತು ಯು.ಪವಾರ, ಎಸ್.ಎಸ್.ಕೆ ಪಂಚ ಟ್ರಸ್ಟ ಕಮಿಟಿ ಅಧ್ಯಕ್ಷ ಲೋಕನಾಥ ಬಿ.ಕಬಾಡಿ, ಸದಸ್ಯರಾದ ಸತ್ಯನಾರಾಯಣ ಕಬಾಡಿ, ಶಂಕರಸಾ ಮೇರವಾಡೆ ಹಾಗೂ ಸದಸ್ಯರು, ಶಿಕ್ಷಣ ಸಂಸ್ಥೆಯ ಮುಖ್ಯೋಪಾಧ್ಯಾಯೆ ಎಸ್.ಡಿ. ಬೆಣಕಲ್, ಸಿ.ಎಸ್. ಹವಳದ ಮತ್ತು ಎಲ್ಲ ಶಿಕ್ಷಕರು ವಿದ್ಯಾರ್ಥಿಗಳಿಗೆ ಅಭಿನಂದಿಸಿದ್ದಾರೆ.

## ಸ್ಥಳೀಯ ಸಂಸ್ಥೆಗಳಲ್ಲಿ ಬಿ.ಬಿ. ಎಂ.ಪಿ ಮಾದರಿಯಲ್ಲಿ ಇ-ಆಸ್ತಿ ನೀಡಿಕೆ: ಸಚಿವ ರಹಿಂ ಖಾನ್

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ,- ಸುವರ್ಣಸೌಧ

ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಬಿ. ಬಿ. ಎಂ. ಪಿ. ಮಾದರಿಯಲ್ಲಿ ಎ - ಖಾತಾ ಮತ್ತು ಬಿ-ಖಾತಾ ಎಂದು ಇ-ಆಸ್ತಿ ನೀಡುವ ಕಾರ್ಯವನ್ನು ಜಾರಿಗೊಳಿಸಲಾಗುವುದು ಎಂದು ಪೌರಾಡಳಿತ ಮತ್ತು ಹಜ್ ಸಚಿವ ರಹಿಂ ಖಾನ್ ತಿಳಿಸಿದರು.

ಅವರು ಮಂಗಳವಾರ ವಿಧಾನ ಪರಿಷತ್ತಿನಲ್ಲಿ ಸದಸ್ಯ ಚಿದಾನಂದ ಎಂ ಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಾಯ್ದೆ, 2020ರ ಕಲಂ 144(6) ಮತ್ತು (21)ರ ಅಂಶವನ್ನು ರಾಜ್ಯದ ಇತರ ಮಹಾನಗರ ಪಾಲಿಕೆಗಳು / ನಗರ ಸ್ಥಳೀಯ ಸಂಸ್ಥೆಗಳಿಗೂ ಸಹ ವಿಸ್ತರಿಸಲು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ಹಾಗೂ ಕರ್ನಾಟಕ ಪುರಸಭೆಗಳ ಅಧಿನಿಯಮ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಾಯ್ದೆ, 2020ರಕಲಂ 144(6) ಮತ್ತು (21) ರ ಅಂಶವನ್ನು ರಾಜ್ಯದ ಇತರ ಮಹಾನಗರ ಪಾಲಿಕೆಗಳು / ನಗರ ಸ್ಥಳೀಯ ಸಂಸ್ಥೆಗಳಿಗೂ ಸಹ ವಿಸ್ತರಿಸಲು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ಹಾಗೂ ಕರ್ನಾಟಕ ಪುರಸಭೆಗಳ ಅಧಿನಿಯಮ 1964ರಲ್ಲಿ ಅಳವಡಿಸಿಕೊಳ್ಳುವ ಸಂಬಂಧ ರಾಜ್ಯಪತ್ರದಲ್ಲಿ ರಾಜ್ಯದ ಇತರ ಮಹಾನಗರ ಪಾಲಿಕೆಗಳು / ನಗರ ಸ್ಥಳೀಯ ಸಂಸ್ಥೆಗಳಿಗೂ ಸಹ ವಿಸ್ತರಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964 ಮತ್ತು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ಕ್ಕೆ ತಿದ್ದುಪಡಿ ತರಲಾಗಿದೆ. ಅದರಂತೆ, ನಿಯಮಗಳಲ್ಲಿ ತಿದ್ದುಪಡಿ ತರಲು ಕ್ರಮ ವಹಿಸಲಾಗುತ್ತಿದೆ ಎಂದರು.

# ಡಿ.20ರಂದು ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಡಿಸೆಂಬರ್ 20 ರಂದು ಬೆಳಿಗ್ಗೆ 09-30 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಎರಡನೇ ಮಹಡಿ ರೂಮ್ ನಂ. 215, ಜಿಲ್ಲಾಡಳಿತ ಭವನ, ಹುಬ್ಬಳಿ ರೋಡ್ ಗದಗ ಇಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಸದರಿ ನೇರ ಸಂದರ್ಶನದಲ್ಲಿ ಈ ಕೆಳಗಿನ ಕಂಪನಿಗಳು ಭಾಗವಹಿಸಲಿವೆ.

ಚೈತನ್ಯ ಇಂಡಿಯಾ ಫೈನಾನ್ಸ್ ಕ್ರೆಡಿಟ್ ಪ್ರೈವೇಟ್ ಲಿಮಿಟೆಡ್, ಬೆಟಗೇರಿ-ಗದಗ

ವಿದ್ಯಾರ್ಹತೆ : ಎಸ್.ಎಸ್.ಎಲ್.ಸಿ, ಪಿ,ಯು.ಸಿ ( 10+2), ಡಿಪ್ಲೋಮಾ ಮತ್ತು ಯಾವುದೇ ಪದವಿ.

ಹುದ್ದೆ : ಕಸ್ಟಮರ್ ರಿಲೇಷನಶಿಪ್ ಆಫೀಸರ.

ಕಡ್ಡಾಯವಾಗಿ ದ್ವಿಚಕ್ರ ವಾಹನ ಹೊಂದಿರಬೇಕು.

ವಯಸ್ಸು : 18 ರಿಂದ 28.

ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದು.

ಜಿಂದಾಲ್ ಸವರಫೀಲ್ಡ್ ಸ್ಟಕ್ಚರ್ಸ್ ಲಿಮಿಟೆಡ್ ತೋರಣಗಲ್.

ವಿದ್ಯಾರ್ಹತೆ : ಐ.ಟಿ.ಐ. ಎಲ್ಲಾ ಟ್ರೇಡ್‌ಗಳು

ಹುದ್ದೆ : ಅಪ್ರೆಂಟಿಸ್

ವಯಸ್ಸು : 18 ರಿಂದ 25

ಕೆಲಸದ ಸ್ಥಳ : ತೋರಣಗಲ್ಲ ಬಳ್ಳಾರಿ.

ನೇರ ಸಂದರ್ಶನದಲ್ಲಿ ಪಾಲ್ಗೊಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು, 2 ರೆಸ್ಯೂಮೆ(ಬಯೋಡಾಟಾ)ಪ್ರತಿಗಳು, ಮತ್ತು ಆಧಾರ್ ಕಾರ್ಡ್ ಜೆರಾಕ್ಸ್ ನೊಂದಿಗೆ ಭಾಗವಹಿಸಬಹುದು. ನೇರ ಸಂರ್ದಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ, 6363330688, ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ನೋಂದಣಿಯನ್ನು ನೇರ ಸಂರ್ದಶನದ ದಿನದಂದೇ ಮಾಡಿಸಬೇಕು.

# ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 18 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 4 - ಗೌರಿಗುಡಿ, ಬ್ಯಾಳಿಯವರ ಲೈನ್, ಪೋಸ್ಟ್ ಆಫೀಸ್, ಮಿಷನ್ ಕಾಂಪೌಂಡ್, ಟರ್ನಲ್ ಪೇಟೆ, ಬಿ ಎಸ್ ಎನ್ ಎಲ್ ಆಫೀಸ್ ಹಿಂದಿನ ಭಾಗ, 200 ಮನೆ, 270 ಮನೆಗಳ ಲೈನ್, ಕಣವಿ ಪ್ಲಾಟ್ ಪೂರ್ತಿ ಭಾಗಗಳು, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 22 - ನಿಂಗಪ್ಪರ ಲೈನ್, ಉಕ್ಕಿಯವರ ಲೈನ್, ಪಾಮಡೆಯವರ ಲೈನ್, ಸಫಾಯಿಯವರ ಲೈನ್, ವಾಯಿದ್ ಅವರ 1 ರಿಂದ 5 ಲೈನ್‌ಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6, 7 - ಮಿಸ್ಕಿನ ಪ್ಲಾಟ್, ಪಿ ಪಿ ಗುಡಿ, ಬಾಳಿಕಾಯಿಯವರ ಲೈನ್, ಹೊನ್ನಪ್ಪರವರ ಲೈನ್, ಪಾಟೀಲರವರ ಲೈನ್, ರೇಣುಕಾಚಾರ್ಯ ಲೈನ್, ಹನುಮಂತ ದೇವರು ಗುಡಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 20, 21, 23 - ಕೆರೆಕಲಮಟ್ಟಿ, ಸಿ ಟಿ ಹಾಲ್ ಭಾಗ-1,2 , ಹಾಳದಿಬ್ಬ, ಸೋಮೇಶ್ವರ ಗುಡಿ, ಕಲಬಂಡಿಯವರ ಲೈನ್, 2 ನಂ. ಶಾಲೆ, ಜಂತ್ಲಿ ಲೈನ್, ಕುಂಬಾರ ಓಣಿ, ಈಟಿಯವರ 4 ಭಾಗಗಳು ಕೆಲವು ಸಣ್ಣಪುಟ್ಟ ಲೈನ್‌ಗಳು. ವಾರ್ಡ್ ನಂ. 29 - ಶಿಕ್ಷಕರ ಬಡಾವಣೆ, ರಾಜೀವ ಗಾಂಧಿ ನಗರ ಕೆಳಗಿನ ಭಾಗ, ಪೊಲೀಸ್ ಸ್ಟೇಷನ್ ಕೆಳಗಿನ ಭಾಗ, ಗುಂಪಿನ ಮನೆ, ಭಾಂಡಗೆಯವರ ಲೈನ್, ಉರ್ದು ಶಾಲೆಯ ಉಳಿದ ಕೆಲವು ಭಾಗಗಳು.

ಪ್ರಕಟಣೆ: ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತಮ್ಮ ನೀರಿನ ಕರವನ್ನು ತುಂಬಲು ನಗರಸಭೆಯ ಅಧಿಕಾರಿಗಳು ಪ್ರಕಟಣೆಯ ಮೂಲಕ ತಿಳಿಸಿದ್ದಾರೆ. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ್ ತುಂಬದೇ ಹೋದರೆ, ನಳಗಳನ್ನು ಬಂದ ಮಾಡಲಾಗುತ್ತದೆ. ಆದ ಕಾರಣ ನೀರಿನ ಕರವನ್ನು ತುಂಬಲು ಪ್ರಕಟಣೆ ಮೂಲಕ ಸಾರ್ವಜನಿಕರಿಗೆ ತಿಳಿಸಲಾಗಿ.

# ಗಮನ ಸೆಳೆದ ನರೇಗಾ ಮಾಹಿತಿ ಮಳಿಗೆ

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನಲ್ಲಿ ನಡೆದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಯಿಂದ ನಿರ್ಮಿಸಿದ ನರೇಗಾ ಮಾಹಿತಿ ಮಳಿಗೆ ಕಾರ್ಯಕ್ರಮಕ್ಕೆ ಆಗಮಿಸಿದ ಜನರ ಮೆಚ್ಚುಗೆಗೆ ಪಾತ್ರವಾಯಿತು.



ಜಿಲ್ಲಾ ಪಂಚಾಯತ ಗದಗ ಹಾಗೂ ತಾಲೂಕು ಪಂಚಾಯತ ರೋಣ ಅವರ ಸಹಯೋಗದೊಂದಿಗೆ ಪಟ್ಟಣದ ದ್ರೋಣಾಚಾರ್ಯ ಕ್ರೀಡಾಂಗಣದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ)ಯಡಿ ನಿರ್ಮಾಣ ಮಾಡಿದ ಮಳಿಗೆಯಲ್ಲಿ ಒಂದೇ ಸೂರಿನಡಿ ಜನರಿಗೆ ಹಾಗೂ ರೈತರಿಗೆ ಮಾಹಿತಿ ನೀಡುವ ಕಾರ್ಯವನ್ನು ಮಾಡಲಾಯಿತು.

ಮಾಹಿತಿ ಮಳಿಗೆಯಲ್ಲಿ ಜನರಿಗೆ ಹಾಗೂ ರೈತರಿಗೆ ನರೇಗಾ ಯೋಜನೆಯಡಿ ಕೃಷಿ ಚಟುವಟಿಕೆಗಳೊಂದಿಗೆ ಜಮೀನಿನ ಉತ್ಪಾದಕತೆಯನ್ನು ಹೆಚ್ಚಿಸಿ, ಅವರ ಕುಟುಂಬಕ್ಕೆ ಜೀವನೋಪಾಯದ ಮಾರ್ಗಗಳನ್ನು ಬಲಪಡಿಸಲು ಸಹಕಾರಿ ಆಗುವ ಕರಪತ್ರಗಳನ್ನು ಹಂಚಲಾಯಿತು. ವೈಯಕ್ತಿಕ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ದನದ ಕೊಟ್ಟಿಗೆ, ಬಚ್ಚಲು ಗುಂಡಿ, ಕೋಳಿ ಶೆಡ್, ಕುರಿಶೆಡ್, ಕೃಷಿ ಬಾವಿ, ಕೃಷಿ ಹೊಂಡ, ಅರಣ್ಯೀಕರಣ, ತೋಟಗಾರಿಕೆ ಸೇರಿದಂತೆ ವಿವಿಧ ಕಾಮಗಾರಿಗಳ ಅನುಷ್ಠಾನದ ಕುರಿತು ಜನರಿಗೆ ತಿಳಿಸಲಾಯಿತು.

**ನರೇಗಲ್ಲದಲ್ಲಿ ನಡೆಯುತ್ತಿರುವ ಬಡ್ಡಿ ವ್ಯವಹಾರ ದಂಧೆ ತಡೆಯಲು ಆಗ್ರಹ**

# ಆತ್ಮಹತ್ಯೆಗಳ ಕುರಿತು ತನಿಖೆಯಾಗಲಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬಡ್ಡಿಗೆ ಹಣ ನೀಡಿದವರ ಕಾಟಕ್ಕೆ ಬೇಸತ್ತು ಪಟ್ಟಣದ ಅನೇಕ ಯುವಕರು ಆತ್ಮಹತ್ಯೆ ಮಾಡಿಕೊಂಡಿರುವುದು ಕಳವಳಕಾರಿ ಸಂಗತಿ. ಇದನ್ನು ತಡೆಯಲು ಎಲ್ಲರೂ ಒಮ್ಮನಸ್ಸಿನಿಂದ ಶ್ರಮಿಸಬೇಕು. ಇದಕ್ಕೆ ಪೊಲೀಸ್ ಇಲಾಖೆಯ ಸಹಕಾರವೂ ಬೇಕೆಂದು ನರೇಗಲ್ಲ ಪಟ್ಟಣ ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಿವನಗೌಡ ಪಾಟೀಲ ಹೇಳಿದರು.

ನರೇಗಲ್ ಪಟ್ಟಣ ಅಭಿವೃದ್ಧಿ ಸಮಿತಿಯಿಂದ ಪಟ್ಟಣದ ಕಲ್ಮೇಶ್ವರ ದೇವಸ್ಥಾನದ ಆವರಣದಲ್ಲಿ ಊರಿನಲ್ಲಿ ಹೆಚ್ಚುತ್ತಿರುವ ತರುಣರ ಆತ್ಮಹತ್ಯೆ ಪ್ರಕರಣ, ಕುಟುಂಬ ವ್ಯವಸ್ಥೆ, ದುಡಿಯುವ ಸಂಸ್ಕೃತಿಯ ಕುರಿತು ಚರ್ಚಿಸಲು ಕರೆಯಲಾಗಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಬಡ್ಡಿ ವ್ಯವಹಾರದ ಕಿರುಕುಳದಿಂದಾಗಿ 35 ವಯಸ್ಸಿನ ಒಳಗಿನ ಅಂದಾಜು 30-35 ಯುವಕರು ಪಟ್ಟಣದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆದರೆ ಆತ್ಮಹತ್ಯೆಗಳ



ಬಗ್ಗೆ ಎಲ್ಲಿಯೂ ಪ್ರಕರಣಗಳು ದಾಖಲಾಗಿಲ್ಲ. ಅಗತ್ಯಕ್ಕಾಗಿ ಹಣ ಪಡೆಯುವ ಯುವಕರ ಮೇಲೆ ಅತಿರೇಕದ ಒತ್ತಡ ಹಾಕಿ ದೈಹಿಕ ಹಾಗೂ ಮಾನಸಿಕ ಹಲ್ಲೆಗಳನ್ನು ಮಾಡುತ್ತಾರೆ. ಮನೆವರೆಗೆ ಬಂದು ಭಯ ಹುಟ್ಟಿಸುತ್ತಾರೆ. ಕೆಲವೊಮ್ಮೆ ಮನೆಯ ಮಹಿಳೆಯರ ಮೇಲೆಯೂ ಬೆದರಿಕೆ ಹಾಕುತ್ತಾರೆ. ಹೀಗಾಗಿ ಮರ್ಯಾದೆಗೆ ಹೆದರಿ ತರುಣರು ತಮ್ಮ ಜೀವನವನ್ನು ಕಳೆದುಕೊಳ್ಳುತ್ತಿದ್ದಾರೆ.

ಹಣ ನೀಡಿದ ಬಲಾಢ್ಯರ ವಿರುದ್ಧ ಹೋರಾಡಲಾಗದೆ ಪೊಲೀಸ್ ಸ್ಟೇಷನ್‌ನಲ್ಲಿ ಪ್ರಕರಣಗಳನ್ನು ದಾಖಲಿಸುತ್ತಿಲ್ಲ. ಹೀಗಾಗಿ ನರೇಗಲ್‌ನಲ್ಲಿ ಸಂಭವಿಸುತ್ತಿರುವ ಆತ್ಮಹತ್ಯೆಗಳು ಮುಚ್ಚಿ ಹೋಗುತ್ತಿವೆ. ಇದಕ್ಕೆ ಕಡಿವಾಣ ಹಾಕಲು ಎಲ್ಲಾ ಸಮಾಜದ ಹಿರಿಯರು ಸಮಿತಿಯ ಮೂಲಕ ಮುಂದಾಗಿದ್ದೇವೆ. ಈ ಕುರಿತು ತನಿಖೆ ಕೈಗೊಳ್ಳುವಂತೆ ಮನವಿ ಸಲ್ಲಿಸಲಾಗುತ್ತದೆ ಎಂದರು.

ಗುರುರಾಜ ಕುಲಕರ್ಣಿ ಮಾತನಾಡಿ, ಮಕ್ಕಳಿಗೆ ನೈತಿಕ ಶಿಕ್ಷಣ, ಧರ್ಮ-ಸಂಸ್ಕೃತಿಯ ತಿಳುವಳಿಕೆ ನೀಡಲು ಮುಂದಾಗಬೇಕು. ಅದಕ್ಕಾಗಿ ಪ್ರತಿ ಶಾಲೆ, ಓಣಿಗೆ ಹೋಗಿ ನೈತಿಕ ಮೌಲ್ಯಗಳನ್ನು ತುಂಬುವ ಕಾರ್ಯ ಮಾಡೋಣ ಎಂದರು.

> ರೈತ ಸಮೃದ್ಧಿ ಕೇಂದ್ರದ ಅಧ್ಯಕ್ಷ ಜಗದೀಶ ಸಂಕನಗೌಡ್ರ ಮಾತನಾಡಿ, ಸಮಿತಿಯವರು ಈಗಾಗಲೇ ಮಾನವ ಹಕ್ಕುಗಳ ನಿಯೋಗ, ಮಕ್ಕಳ ಹಕ್ಕುಗಳ ನಿಯೋಗದ ಅಧ್ಯಕ್ಷರ ಜೊತೆಯಲ್ಲಿ ಸಂಪರ್ಕದಲ್ಲಿದ್ದೇವೆ. ಅವರಿಗೆಲ್ಲಾ ಸಂಪೂರ್ಣ ಮಾಹಿತಿಯನ್ನು ಒದಗಿಸಿದ್ದು, ಅವರು ನೀಡಿದ ಮಾರ್ಗದರ್ಶನದಂತೆ ಹೆಜ್ಜೆಇಡುತ್ತಿದ್ದೇವೆ ಎಂದರು

ಶರಣಪ್ಪ ಧರ್ಮಾಯತ, ಚನ್ನಬಸಪ್ಪ ಕುಷ್ಟಗಿ, ಕಳಕನಗೌಡ ಪೊಲೀಸ್‌ಪಾಟೀಲ, ಮುತ್ತಣ್ಣ ಮಾವಿನಕಾಯಿ, ಎ.ಎ. ನವಲಗುಂದ, ಈರಪ್ಪ ಕಳಕೊಣ್ಣರ, ಕೆ.ಎಸ್. ಹಡಪದ, ಶಂಶುದ್ದೀನ ಕುಂದಗೋಳ, ಗಂಗಾಧರ ಬಡಿಗೇರ, ಶರಣಪ್ಪ ಬಡಿಗೇರ, ಕಲ್ಲಪ್ಪ ಗಂಗರಗೊಂಡ, ಚಂದ್ರು ಹೊನವಾಡ, ಎಸ್.ಎ. ಜಕ್ಕಲಿ, ದಾದುಸಾಬ್ ನದಾಫ್, ಸಿ.ವಿ. ವಂಕಲಕುಂಟಿ, ಮಲ್ಲಿಕಾರ್ಜುನ ಮಲ್ಲನಗೌಡ್ರ, ಬಾಳಪ್ಪ ಸೋಮಗೊಂಡ, ಸಂಗನಗೌಡ ಮಾಲಿಪಾಟೀಲ ಇದ್ದರು.

# ಕೊಲೆ ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಮುಳಗುಂದ ಪೊಲೀಸ್ ಠಾಣಾ ವ್ಯಾಪ್ತಿಯ ಕಬಲಾಯತಕಟ್ಟಿ ತಾಂಡಾದದಲ್ಲಿ ಅನೈತಿಕ ಸಂಬಂಧದ ವಿಚಾರವಾಗಿ 1.10.2020ರಂದು ನಡೆದಿದ್ದ ಕೊಲೆ ಪ್ರಕರಣಕ್ಕೆ ಸಂಬಂಧಿಸಿ ನ್ಯಾಯಾಲಯವು ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ಹಾಗೂ ದಂಡ ವಿಧಿಸಿ ತೀರ್ಪು ಹೊರಡಿಸಿದೆ.

ಪ್ರಕರಣದ ಆರೋಪಿತರಾದ ಸೋಮಪ್ಪ ಚನ್ನಪ್ಪ ಲಮಾಣಿ(40)–ಸಾ;ಅತ್ತಿಕಟ್ಟಿ ತಾಂಡಾ, ಮುಂಡರಗಿ, ಲಲಿತಾ ಕೋಂ ಲಕ್ಷ್ಮಣ ಲಮಾಣಿ(35)–ಸಾ;ಕಬಲಾಯತಕಟ್ಟಿ ಕೂಡಿಕೊಂಡು, ಪಿರ್ಯಾದಿ ಕಬಲಾಯತಕಟ್ಟಿಯ ರಮೇಶ ಕೃಷ್ಣಪ್ಪ ಲಮಾಣಿ(45) ಈತನ ದೊಡ್ಡಪ್ಪನ ಮಗನಾದ ಲಕ್ಷ್ಮಣ ಪಾಂಡಪ್ಪ ಲಮಾಣಿ(39) ಅವನ ಹೆಂಡತಿ ಲಲಿತಾ ಇವಳು ಅತ್ತಿಕಟ್ಟಿ ತಾಂಡಾದ ಸೋಮಪ್ಪ ಚನ್ನಪ್ಪ ಲಮಾಣಿ ಇವನೊಂದಿಗೆ ಅನೈತಿಕ ಸಂಬಂಧ ಹೊಂದಿದ್ದು, ಈ ವಿಷಯ ಲಕ್ಷ್ಮಣನಿಗೆ ಗೊತ್ತಾಗಿ ಗಲಾಟೆ ಮಾಡುತ್ತಿದ್ದ. ಆರೊಪಿತರಾದ ಸೊಮಪ್ಪ ಮತ್ತು ಲಲಿತಾ ಕೂಡಿ ಲಕ್ಷ್ಮಣನನ್ನು ಕೊಲೆ ಮಾಡಿದರೆ ಎಲ್ಲಾ ಸರಿಯಾಗುತ್ತದೆ ಎಂದು ನಿರ್ಧರಿಸಿ, ಕೊಲೆ ಮಾಡುವ ಉದ್ದೇಶದಿಂದ ಇಬ್ಬರೂ ಕೂಡಿ, 01.10.2020ರಂದು ಒಂದು ಹಗ್ಗದಿಂದ ಲಕ್ಷ್ಮಣ ಪಾಂಡಪ್ಪ ಲಮಾಣಿಯ ಕುತ್ತಿಗೆಗೆ ಬಿಗಿದು ಕೊಲೆ ಮಾಡಿರುವುದಾಗಿ ಮುಳಗುಂದ ಪೊಲೀಸ್ ಠಾಣೆಯಲ್ಲಿ ಗುನ್ನಾ ನಂಬರ್: 46/2020 ಕಲಂ: 302 ರೆ/ವ್ಹಿ 34 ಐಪಿಸಿ.ರಡಿ ಮುಳಗುಂದ ಪೊಲೀಸ್ ಠಾಣೆಯ ಎಎಸ್ಐ ಎ.ಕೆ. ಮಾಳವಾಡ. ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದರು. ಸದರಿ ಪ್ರಕರಣದ ತನಿಖೆಯನ್ನು ಗದಗ ಗ್ರಾಮೀಣ ವೃತ್ತದ ಸಿಪಿಐ ಆರ್.ಎಸ್. ಕಪ್ಪತ್ತನವರ ವಹಿಸಿಕೊಂಡು ಪ್ರಕರಣದ ಸತ್ಯಾಂಶವನ್ನು ಪರಿಶೀಲಿಸಿ ಆರೋಪಿತರಾದ ಸೋಮಪ್ಪ ಚನ್ನಪ್ಪ ಲಮಾಣಿ, ಲಲಿತಾ ಕೋಂ ಲಕ್ಷ್ಮಣ ಲಮಾಣಿ ಇವರನ್ನು 02.10.2020ರಂದು ದಸ್ತಗಿರ ಮಾಡಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದರು. ಸದರಿ ಪ್ರಕರಣದ ತನಿಖೆ ಮುಂದುವರೆಸಿ, ಸಾಕ್ಷಿ ಪುರಾವೆಗಳನ್ನು ಸಂಗ್ರಹಿಸಿ ಆರೋಪಿತರ ಮೇಲೆ ದೋಷಾರೋಪಣ ಪತ್ರ ತಯಾರಿಸಿ ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಅದರಂತೆ ಮಾನ್ಯ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ಎಸ್‌ಸಿ. ನಂ: 10/2021 ನೇದ್ದರಲ್ಲಿ ವಿಚಾರಣೆ ನಡೆದಿದ್ದು, ಸರ್ಕಾರಿ ಅಭಿಯೋಜಕರಾದ ಸವಿತಾ ಎಂ.ಶಿಗ್ಲಿ ಅವರು ಆರೋಪಿತರಿಗೆ ಶಿಕ್ಷೆಯಾಗುವಂತೆ ಕರ್ತವ್ಯ ನಿರ್ವಹಿಸಿದ್ದು, ಸದರ ಪ್ರಕರಣದಲ್ಲಿ ಆರೋಪಿತನಿಗೆ ಮಾನ್ಯ ಜಿಲ್ಲಾ, ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಬಸವರಾಜ ಅವರು ಇಬ್ಬರೂ ಆರೋಪಿತರಿಗೆ ಜೀವಾವದಿ ಶಿಕ್ಷೆ ಹಾಗೂ ತಲಾ 5 ಸಾವಿರ ರೂ ದಂಡ ವಿಧಿಸಿ ತೀರ್ಪು ನೀಡಿದ್ದಾರೆ.

### ನೆರವು ಪತ್ತಿನ ಸಹಕಾರಿ ಸಂಘದ ಕಾರ್ಯಕ್ರಮದಲ್ಲಿ ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ

# ಸಂಘ ಎಲ್ಲರಿಗೂ ನೆರವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ದೊರೆಸ್ವಾಮಿ ವಿರಕ್ತಮಠ, ಬೈರನಹಟ್ಟಿ ಹಾಗೂ ಶಿರೋಳದ ಶ್ರೀ ತೋಂಟದಾರ್ಯಮಠ ಸ್ವಾಮಿಜೀಗಳಾದ ಶ್ರೀ ಶಾಂತಲಿಂಗ ಸ್ವಾಮಿಗಳು ಆಶೀರ್ವದಿಸಿ, ನೆಮ್ಮದಿಯ ಜೀವನದೊಂದಿಗೆ ಬದುಕು ಕಟ್ಟಿಕೊಳ್ಳವಲ್ಲಿ ಸಹಕಾರ ಸಂಘಗಳು ನೇರವಾಗಿವೆ. ಸಹಕಾರ ರಂಗಕ್ಕೆ ಗದಗ ಜಿಲ್ಲೆಯ ದಿ. ಶಿದ್ದನಗೌಡ ಸಣ್ಣರಾಮನಗೌಟ ಪಾಟೀಲರ ಹಾಗೂ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲರ ಕೊಡುಗೆ ಅಪಾರವಾದುದು ಎಂದರು.

ನಗರದ ಬಸವೇಶ್ವರ ನಗರದ ಸ್ಟೇಷನ್ ರಸ್ತೆಯ ಹಿರೇಮಠ ಟ್ರಸ್ಟ್ ಕಾಂಪ್ಲೆಕ್ಸ್‌ನಲ್ಲಿ ನೂತನವಾಗಿ ಪ್ರಾರಂಭಿಸಿದ ನೆರವು ಪತ್ತಿನ ಸಹಕಾರಿ ಸಂಘ ನಿಯಮಿತ ಗದಗ ಇದರ ಪ್ರಧಾನ ಕಚೇರಿಯಲ್ಲಿ ಧಾರ್ಮಿಕ ಪೂಜಾ ಕಾರ್ಯಕ್ರಮದಲ್ಲಿ ಭಾಗಿಯಾಗಿ, ನಂತರ ನಡೆದ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ ಮಾತನಾಡಿ, ಬಡ–ಮಧ್ಯಮ ವರ್ಗದ ಕುಟುಂಬಗಳ, ರೈತರ ಹಾಗೂ ಸಣ್ಣ ಪುಟ್ಟ ವ್ಯಾಪಾರಗಳ ಆರ್ಥಿಕ ಸಬಲತೆಗೆ ನೆರವು ಪತ್ತಿನ ಸಹಕಾರಿ ಸಂಘ ನಿಯಮಿತ ಹೆಸರಿಗೆ ತಕ್ಕಂತೆ ನೆರವು ನೀಡಲಿದೆ. ಏಷ್ಯಾ ಖಂಡದಲ್ಲೇ ಮೊಟ್ಟಮೊದಲು ಸಹಕಾರಿ ಸಂಘ ಸ್ಥಾಪಿಸುವಲ್ಲಿ ದಿ. ಶಿದ್ಧನಗೌಡ ಸಣ್ಣರಾಮನಗೌಡ ಪಾಟೀಲ ಹಾಗೂ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲ ಹಾಗೂ ಆ ಕ್ಷೇತ್ರಕ್ಕೆ ಸೇವೆ ಸಲ್ಲಿಸಿದವರನ್ನು ನಾವು ನೆನೆಯುವದು ಆದ್ಯ ಕರ್ತವ್ಯ ಎಂದರು.




ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಹುಬ್ಬಳ್ಳಿಯ ಕರ್ನಾಟಕ ವಾಣಿಜ್ಯೋದ್ಯಮ ಹಾಗೂ ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಸಿದ್ಧರಾಮಯ್ಯ ಸಂಶಿಮಠ ಮಾತನಾಡಿ, ಪಾರದರ್ಶಕತೆಯಿಂದ ಸಹಕಾರ ಸಂಘ ನಡೆಸಿದರೆ ಸಂಘಕ್ಕೆ ಉತ್ತಮ ಭವಿಷ್ಯವಿದೆ ಎಂದರು.


ವಿಶೇಷ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕ ಡಿ.ಎಸ್. ತಳವಾರ ರಾಜ್ಯ ಹಿರಿಯ ನಾಗರಿಕರ ಜೀವನ ಗೌರವ ಅಭಿಯಾನದ ಅಧ್ಯಕ್ಷ ಬಿ.ಎ. ಪಾಟೀಲ, ಅತಿಥಿಗಳಾಗಿ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಧರ್ಮದರ್ಶಿಗಳಾದ ಶಿವಪುತ್ರಪ್ಪ ಬೇವಿನಮರದ, ಶ್ರೀ ಶಂಕರಲಿಂಗ ದೇವಸ್ಥಾನದ ಧರ್ಮದರ್ಶಿಗಳಾದ ಅರುಣ ಮುನವಳ್ಳಿ, ಶ್ರೀ ಕಟ್ಟಿಬಸವೇಶ್ವರ ಹಾಗೂ ಪಂಚಮೂರ್ತಿ ಹಾಗೂ ನವಗ್ರಹ ದೇವಸ್ಥಾನದ ಧರ್ಮದರ್ಶಿಗಳಾದ ಶ್ರೀ ಭೀಮರಡ್ಡಿ ಕಿಲಬಣ್ಣವರ ಪಾಲ್ಗೊಂಡಿದ್ದರು.

ಗದಗ ತಾಲೂಕ ಸಹಕಾರಿ ಸಂಘದ ನಿರೀಕ್ಷಕರಾದ ಶಾಂತಾ ಹಿರೇಮಠ, ಎಸ್. ಲೇಡ್ಜರ್ ತಂತ್ರಾಂಶ ಸಂಸ್ಥೆಯ ಹಿರಿಯ ವ್ಯವಸ್ಥಾಪ (ಮಾರುಕಟ್ಟೆ ವಿಭಾಗ) ಆನಂದ ಆಶ್ರಿತ, ನರಗುಂದದ ಲೆಕ್ಕ ಪರಿಶೋಧಕ ಸಹಾಯಕ ಮಹಾಂತೇಶ ಸೂರಪೂರ, ರಾಷ್ಟ್ರೀಯ ಹಿರಿಯ ನಾಗರಿಕರ ಜೀವನ ಗೌರವ ಅಭಿಯಾನದ ಅಧ್ಯಕ್ಷ ವಿಜಯ ದೇಶಮುಖ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸದಸ್ಯರಿಗೆ ಸಾಂಕೇತೀಕವಾಗಿ ಷೇರು ಪ್ರಮಾಣಪತ್ರವನ್ನು ವಿತರಿಸಲಾಯಿತು. ಸಮಾರಂಭದ ಅಧ್ಯಕ್ಷತೆಯನ್ನು ಭಾರತ ಸ್ವಾಭಿಯಾನ ಟ್ರಸ್ಟ್‌ನ ಜಿಲ್ಲಾ ಪ್ರಭಾರಿ ರುದ್ರಣ್ಣ ಗುಳಗುಳಿ ವಹಿಸಿದ್ದರು. ಸಂಘದ ಉಪಾಧ್ಯಕ್ಷರಾದ ಶಿವಕುಮಾರಗೌಡ ಪಾಟೀಲ, ಗೌರವ ಕಾರ್ಯದರ್ಶಿ ಶರಣೇಶ ಇಟಗಿ, ನಿರ್ದೇಶಕರಾದ ಶಂಕರ ಕಾರದಕಟ್ಟಿ, ದಾನೇಶ ತಡಸದ, ಶ್ರೀಶೈಲ ತಡಸದ, ರಮೇಶ ಗಾರವಾಡ, ವಿಶ್ವನಾಥ ಅಂಗಡಿ, ನಾಗರಾಜ ಬೇವಿನಕಟ್ಟಿ, ಶ್ರೀಕಾಂತ ಜವಳಿ, ರೂಪಾ ಗೋಕಾವಿ, ಪ್ರಿಯಾ ಕಬಾಡಿ, ಶ್ರೀ ವರಸಿದ್ಧಿ ವಿನಾಯಕ ಮಿತ್ರ ಮಂಡಳಿ ಸದಸ್ಯರಾದ ಕಿರಣ ಕಬಾಡಿ, ಅನಿಲ ಶೆಟ್ಟರ ಮುಂತಾದವರು ಉಪಸ್ಥಿತರಿದರು. ಸಂಘದ ಅಧ್ಯಕ್ಷ ವಿಶ್ವನಾಥ ಶೀರಿ ಸ್ವಾಗತಿಸಿ, ವಂದಿಸಿದರು.

> ವಾರ್ಡ್ ನಂ.15ರ ನಗರಸಭಾ ಸದಸ್ಯ ಚಂದ್ರು ತಡಸದ ಮಾತನಾಡಿ, ನಮ್ಮ ವಾರ್ಡಿನ ಜನತೆ ಹಾಗೂ ಸಾರ್ವಜನಿಕರು ಸದರಿ ಸಂಘದಲ್ಲಿ ಷೇರುಗಳನ್ನು ಪಡೆಯುವ ಮೂಲಕ ಸಹಕಾರ ನೀಡೋಣ. ಸಹಕಾರ ಸಂಘಗಳನ್ನು ಮುನ್ನಡೆಸಲು ಬೆಳಗಾವಿ ಜಿಲ್ಲೆಯಲ್ಲಿರುವ ಸಂಘಗಳನ್ನು ನಾವು ಮಾದರಿಯಾಗಿ ಇಟ್ಟುಕೊಂಡರೆ ನಮಗೆ ಸಹಾಯವಾಗಲಿದೆ ಎಂದರು.

# ಕೃಷಿಕ ಸಮಾಜದ ಸದಸ್ಯರಾಗಿ ನಜೀರಅಹ್ಮದ ಡಂಬಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, , ಶಿರಹಟ್ಟಿ

ಇತ್ತೀಚೆಗೆ ಶಿರಹಟ್ಟಿ ತಾಲೂಕಾ ಕೃಷಿಕ ಸಮಾಜದ ಚುನಾವಣೆಯಲ್ಲಿ ನಜೀರಅಹ್ಮದ ಎಫ್.ಡಂಬಳ ಅವಿರೋಧವಾಗಿ ಆಯ್ಕೆಯಾಗಿದ್ದಕ್ಕೆ ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ ಸೋಮವಾರ ತಮ್ಮ ಕಚೇರಿಯಲ್ಲಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹುಮಾಯೂನ್ ಮಾಗಡಿ, ಶಿರಹಟ್ಟಿ ತಾಲೂಕಿನಲ್ಲಿ ರೈತಾಪಿ ವರ್ಗದವರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಕೃಷಿಕ ಸಮಾಜದ ವತಿಯಿಂದ ರೈತರಿಗೆ ಕಾಲಕಾಲಕ್ಕೆ ಅಗತ್ಯ ಮಾರ್ಗದರ್ಶನ ಮತ್ತು ಸರಕಾರದ ಸೌಲಭ್ಯಗಳು ತಲುಪಿಸುವ ಕೆಲಸ ಕೃಷಿಕ ಸಮಾಜದ ವತಿಯಿಂದ ಆಗಬೇಕೆಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ನಜೀರಅಹ್ಮದ ಡಂಬಳ, ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಆದಿಯಾಗಿ ಕಾಂಗ್ರೆಸ್ ಪಕ್ಷದ ಎಲ್ಲ ಪದಾಧಿಕಾರಿಗಳ ಇಚ್ಛಾಶಕ್ತಿಯಿಂದ ಅವಿರೋಧವಾಗಿ ನನ್ನನ್ನು ಆಯ್ಕೆ ಮಾಡಿದ್ದು, ಇವರೆಲ್ಲರ ಸಲಹೆ ಸೂಚನೆಯಂತೆ ರೈತರ ಸಮಸ್ಯೆಗಳಿಗೆ ಸ್ಪಂದಿಸುವುದರ ಜೊತೆಗೆ ಕೃಷಿಕ ಸಮಾಜವನ್ನು ಮುಂಚೂಣಿಯಲ್ಲಿ ತರುತ್ತೇನೆ ಎಂದರು.

ಶಿರಹಟ್ಟಿ ತಾಲೂಕಾ ದಸ್ತಾವೇಜ ಬರಹಗಾರರ ಸಂಘದ ಅಧ್ಯಕ್ಷ ಅಶೋಕ ಹುಬ್ಬಳ್ಳಿ, ಶಂಕರ ಕುಸಲಾಪೂರ, ಬಾಬಾಜಾನ ಕೋಳಿವಾಡ, ಪ್ರವೀಣ ಹುಬ್ಬಳ್ಳಿ, ಮಹಾಂತೇಶ ದಶಮನಿ ಮುಂತಾದವರು ಉಪಸ್ಥಿತರಿದ್ದರು.

### ವಿಶೇಷ ಪಾತ್ರದಲ್ಲಿ ಸಾಹಸ ನಿರ್ದೇಶಕ ಡಾ. ಥ್ರಿಲ್ಲರ್ ಮಂಜು

# 'ಮುಗಿಲ ಮಲ್ಲಿಗೆ'ಗೆ ಹಾಡುಗಳಷ್ಟೇ ಬಾಕಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಇಂಡಿಯನ್ ಜಾಕಿಚಾನ್ ಸಾಹಸ ನಿರ್ದೇಶಕ, ಡಾ. ಥ್ರಿಲ್ಲರ್ ಮಂಜು ವಿಶೇಷ ಪಾತ್ರದಲ್ಲಿ ನಟಿಸುತ್ತಿರುವ, ಎಎನ್‌ಆರ್ ಪಿಕ್ಚರ್ಸ್ ಬ್ಯಾನರ್‌ನ ಅಡಿಯಲ್ಲಿ ನಾಗರಾಜ್ ರೆಡ್ಡಿ ನಿರ್ಮಿಸುತ್ತಿರುವ ಬಹು ನಿರೀಕ್ಷಿತ ಸಿನಿಮಾ 'ಮುಗಿಲ ಮಲ್ಲಿಗೆ' ಚಿತ್ರದ ಮಾತಿನ ಭಾಗದ ಚಿತ್ರೀಕರಣ ಮುಕ್ತಾಯವಾಗಿ ಹಾಡುಗಳಷ್ಟೇ ಬಾಕಿ ಉಳಿದಿವೆ.

ಕಮರೊಟ್ಟು ಚೆಕ್ ಪೋಸ್ಟ್ ಖ್ಯಾತಿಯ ಸನತ್ ಹಾಗೂ ಸಹನಾ ಚಂದ್ರಶೇಖರ್ ನಾಯಕ – ನಾಯಕಿಯಾಗಿ ನಟಿಸುತ್ತಿರುವ 'ಮುಗಿಲ ಮಲ್ಲಿಗೆ' ಒಂದು ದ್ವೇಷ ಮತ್ತು ಪ್ರೀತಿಯ ಸುತ್ತ ನಡೆಯುವ ಪ್ರೇಮಕಥೆಯ ಚಿತ್ರ. ಇಷ್ಟು ದಿನ ಹೊಡಿ ಬಡಿ ಎನ್ನುತ್ತಾ ಪೊಲೀಸ್ ಪಾತ್ರಗಳಲ್ಲಿ ಮಿಂಚಿದ ನಟ, ನಿರ್ದೇಶಕ, ಸಾಹಸ ನಿರ್ದೇಶಕ ಡಾ. ಥ್ರಿಲ್ಲರ್ ಮಂಜು ಮುತ್ತತ್ತಿ ದೇವರಾಜ್ ಹೆಸರಿನ ಎಮೋಷನಲ್ ಪಾತ್ರ ನಿರ್ವಹಿಸುತ್ತಿದ್ದಾರೆ. ಅವರ ಪತ್ನಿಯಾಗಿ ಹಿರಿಯ ನಟಿ ಭವ್ಯಾ ನಟಿಸಿರುವುದು ವಿಶೇಷ. ಈಗಾಗಲೇ ಮಾತಿನ ಹಾಗೂ ಸಾಹಸ ಸನ್ನಿವೇಶಗಳ ಚಿತ್ರೀಕರಣ ಮುಗಿಸಿರುವ 'ಮುಗಿಲ ಮಲ್ಲಿಗೆ' ಚಿತ್ರತಂಡ ಹಾಡುಗಳ ಚಿತ್ರೀಕರಣ–ಕ್ಕಾಗಿ ಸಕಲೇಶ್ವರ, ಮಡಿಕೇರಿಗೆ ಹೊರಟಿದೆ. ತಾಂತ್ರಿಕವರ್ಗದಲ್ಲಿ ಅಭಿನಂದನ್ ಶೆಟ್ಟಿ ಛಾಯಾಗ್ರಹಣ, ಅನಿರುದ್ಧ ಶಾಸ್ತ್ರೀ ಸಂಗೀತ, ರಾಜೀವ್ ಕೃಷ್ಣ ಸಾಹಿತ್ಯ, ವಿನಯ್ ಜಿ.ಆಲೂರು ಸಂಕಲನ, ಥ್ರಿಲ್ಲರ್ ಮಂಜು ಸಾಹಸ, ಇಂದ್ರ ಸ್ಥಿರ ಚಿತ್ರಣ, ಮೋಹನ್ ಕುಮಾರ್ ಪ್ರಸಾಧನ, ಮಲ್ಲಿಕಾರ್ಜುನ ಕಲಾ ನಿರ್ದೇಶನ, ಭದ್ರಾವತಿ ಪ್ರವೀಣ್ ಸಹನಿರ್ದೇಶನ, ಎಂ.ಜಿ. ಕಲ್ಲೇಶ್, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ್ ಹಂಡಗಿ ಅವರ ಪತ್ರಿಕಾ ಸಂಪರ್ಕವಿದೆ. ಈಗಾಗಲೇ ಟಾಲಿವುಡ್‌ನಲ್ಲಿ ರುದ್ರಾಕ್ಷಪುರಂ, ಪ್ರೇಮಭಿಕ್ಷ ಚಿತ್ರಗಳನ್ನು ನಿರ್ದೇಸಿರುವ ಆರ್.ಕೆ. ಗಾಂಧಿ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ.



> ತಾರಾಗಣದಲ್ಲಿ ಸನತ್, ಸಹನಾ ಚಂದ್ರಶೇಖರ್, ಥ್ರಿಲ್ಲರ್ ಮಂಜು, ಭವ್ಯಾ, ರಾಜೇಶ್, ಶಂಕರ್, ಎಂ.ವಿ. ಸಮಯ್, ಕಿಶೋರ್ ಕುಂಬ್ಳೆ, ಶಿವು ಕಾಸರಗೋಡು, ಸಿದ್ದಯ್ಯ ಹಿರೇಮಠ, ರವಿ, ಧೀನ, ಬೃಂದ, ನಾಗ, ಜಯರಾಂ, ಯುವೀನ, ಸತ್ಯವಾರ ನಾಗೇಶ್, ವಸಂತ ನಾಯಕ್, ಕಿರಣ್ ಗಟ್ಟಿಗನಬ್ಬೆ, ಮೋನಿಕಾ ಮೊದಲಾದವರು ನಟಿಸುತ್ತಿದ್ದಾರೆ.


# ಸಿ.ಎಚ್. ಬಾಳನಗೌಡ್ರರಿಗೆ ಗೌರವ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ ಅವರಿಗೆ ಅವರ ಜನ್ಮ ಅಮೃತ ಮಹೋತ್ಸವದ ನಿಮಿತ್ತ ಗೌರವ ಸನ್ಮಾನ ನೀಡಿ ಆಶೀರ್ವದಿಸಲಾಯಿತು.

ಭಾನುವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಹಾಗೂ ಶ್ರೀ ಕೇದಾರ ಭೀಮಾಶಂಕರಲಿಂಗ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಜರುಗಿದ ಶ್ರೀಮದ್ ರಂಭಾಪುರಿ ಜಗದ್ಗುರು ವೀರರುದ್ರಮುನಿದೇವ ಶಿವಾಚಾರ್ಯ ಭಗವತ್ಪಾದರ ಜನ್ಮ ಶತಮಾನೋತ್ಸವ ಸಮಾರಂಭದಲ್ಲಿ ಸಿ.ಎಚ್. ಬಾಳನಗೌಡರಿಗೆ 'ವಾರ್ತಾ ಸೇವಾ ಸಂಜೀವಿನಿ' ಎಂಬ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಶ್ರೀಮದ್ ರಂಭಾಪುರಿ ರುದ್ರಮುನಿ ಜಗದ್ಗುರುಗಳವರ ಕುರಿತಾದ 'ಧರ್ಮ ಚೇತನ' ಕೃತಿ ಮತ್ತು ಸಿ.ಎಚ್. ಬಾಳನಗೌಡ್ರ ಅವರ ಬಾಳ ಪಯಣದ 'ಬಾಳ ಹೊಂಗಿರಣ' ಕೃತಿ ಬಿಡುಗಡೆಗೊಂಡವು. ಸಿ.ಎಚ್. ಬಾಳನಗೌಡ್ರ ಅವರು ಕಳೆದ 3 ದಶಕಗಳಿಂದ ಶ್ರೀ ರಂಭಾಪುರಿ ಪೀಠದ ಸುದ್ದಿ ಪ್ರಸಾರ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಸಮಾರಂಭದಲ್ಲಿ ಸಚಿವರಾದ ಈಶ್ವರ ಖಂಡ್ರೆ, ಕೆ.ಜೆ. ಜಾರ್ಜ್, ಶಾಸಕರಾದ ಟಿ.ಡಿ. ರಾಜೇಗೌಡ, ಹೆಚ್.ಡಿ. ತಮ್ಮಯ್ಯ ಹಾಗೂ ವಿವಿಧ ಮಠಗಳ ಶ್ರೀಗಳು ಉಪಸ್ಥಿತರಿದ್ದರು. ಚುಟುಕು ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಯಜ್ಞಪುರುಷ ಭಟ್ಟರು ಇದೇ ಸಂದರ್ಭದಲ್ಲಿ ಸಿ.ಎಚ್. ಬಾಳನಗೌಡ್ರರಿಗೆ ಶಾಲು ಹೊದೆಸಿ ಅಭಿನಂದಿಸಿದರು.




# ಮಣ್ಣಿನ ಕಲೆಗಳನ್ನು ಉಳಿಸಬೇಕಿದೆ



■ವಿಜಯಸಾಕ್ಷಿ ಸುದ್ದಿ, ಡಂಬಳ

ಕನ್ನಡ ನಾಡಿನಾದ್ಯಂತ ಬೆಳದು ಬಂದಿರುವ ಜಾನಪದ ಸೇರಿದಂತೆ ಮಣ್ಣಿನ ಕಲೆಗಳನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಅಗತ್ಯವಾಗಿ ಮಾಡಬೇಕಾಗಿದೆ ಎಂದು ಗ್ರಾ.ಪಂ ಮಾಜಿ ಉಪಾಧ್ಯಕ್ಷ ಮಳ್ಳಪ್ಪ ಜೊಂಡಿ ಹೇಳಿದರು.

ಡಂಬಳ ಹೋಬಳಿಯ ಡೋಣಿ ಗ್ರಾಮದಲ್ಲಿ ಬೀರಲಿಂಗೇಶ್ವರ ಜನಪದ ಕಲಾ ತಂಡ ಡೋಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವುಗಳ ಸಂಯುಕ್ತ ಆಶ್ರಯದಲ್ಲಿ ಸಾಂಸ್ಕೃತಿಕ ಡೊಳ್ಳಿನ ಪದಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಖ್ಯಾತ ಜಾನಪದ ಕಲಾವಿದ ನಿಂಗಪ್ಪ ಗುಡ್ಡದ, ನಿಂಗಪ್ಪ ಹೊಸಹಳ್ಳಿ ಮಾತನಾಡಿ, ಪ್ರಕೃತಿ, ಕೃಷಿ ಸಂರಕ್ಷಣೆ ಬಗ್ಗೆ ಕಾಳಜಿ ವಹಿಸದಿದ್ದರೆ ಜಾನಪದವು ಅಪಾಯದಂಚಿಗೆ ತಲುಪಬಹುದು. ಪ್ರಕೃತಿ ಮತ್ತು ಸಂಸ್ಕೃತಿಯ ಅವಿನಾಭಾವ ಸಂಬಂಧದ ಕುರಿತು ಚರ್ಚಿಸಿ ಅಭಿವೃದ್ಧಿಯ ಚಿಂತನೆ ರೂಪಿಸಬೇಕಿದೆ ಎಂದರು.

ಕಲಾತಂಡಗಳಾದ ಶ್ರೀ ಮಾಳಿಂಗರಾಯ ಗಾಯನ ಸಂಘ ಮುಗಳಿಹಾಳ, ರಾಯದುರ್ಗದ ಶ್ರೀ ರೇವಣಸಿದ್ದ ಗಾಯನ ಸಂಘ ಸಾಲಹಳ್ಳಿ, ಗೌಡಪ್ಪಗೌಡ ಬಮಪನವರ ತಂಡ, ಎಚ್.ಎಸ್. ವೆಂಕಟಾಪುರ, ಶಿವು ಭಜಂತ್ರಿ ತಂಡ, ಲಕ್ಕುಂಡಿ ಮೈಲಾರಲಿಂಗೇಶ್ವರ ಕಲಾ ತಂಡ ಬೆಲೇರಿ ಭಾಗವಹಿಸಿ ಕಲಾ ಪ್ರದರ್ಶನ ನಿಡಿದವು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪರಸಪ್ಪ ಬೆಳ್ಳಿ, ರಾಘವೇಂದ್ರ ಡೊಳ್ಳಿನ, ಎಪಿಎಂಸಿ ಮಾಜಿ ಸದಸ್ಯ ಮಳ್ಳಪ ಅಳವಂಡಿ, ಕುಮಾರಪ್ಪ ಬೆಲೆರಿ, ನಿಂಗಪ್ಪ ಹೋಸಹಳ್ಳಿ, ಹಾಲಪ್ಪ ಕುರಿ, ನಿಂಗಪ್ಪ ಗುಡ್ಡದ ಇದ್ದರು. ಹಾಲೇಶ್ ಅಣ್ಣೀಗೇರಿ ಸ್ವಾಗತಿಸಿದರು, ನಿಂಗರಾಜು ಗುಡ್ಡದ ನಿರೂಪಿಸಿದರು.



ಜನತಾ ಪಕ್ಷದ ಸಂಘಟನಾ ಪರ್ವದ ಪೂರ್ವಭಾವಿ ಸಭೆ ವಾರ್ಡ್ ನಂ. 33ರಲ್ಲಿ ಜರುಗಿ–ತು . ಗದಗ ವಿಧಾನಸಭಾ ಕ್ಷೇತ್ರದ ಶ್ರೀ ರೇಣುಕಾಚಾರ್ಯ ಶಕ್ತಿ ಕೇಂದ್ರದ ಬೂತ್ ಸಂಖ್ಯೆ 117,119,120,122,123 ರಲ್ಲಿ ಸಂಘಟನಾ ಪರ್ವದ ಪೂರ್ವಭಾವಿ ಸಭೆಯನ್ನು ಮಾಡಲಾಯಿತು. ಈ ಸಂದರ್ಭದಲ್ಲಿ ಸಂಘಟನಾ ಪರ್ವದ ಶ್ರೀ ರೇಣುಕಾಚಾರ್ಯ ಶಕ್ತಿ ಕೇಂದ್ರದ ಸಂಯೋಗಿಗಳಾದ ಸಂತೋಷ ಅಕ್ಕಿ, ಹಿರಿಯರಾದ ಜಗನ್ನಾಥಸಾ ಬಾಂಡಗೆ, ಅಪ್ಪಣ್ಣ ತೆಂಗಿನಕಾಯಿ, ಪ್ರಮುಖರಾದ ಅಮೃತ್ ಶಾನಬೋಗರ, ವಿರೇಶ್ ಪುರ, ಮಂಜುನಾಥ ಗಾಂಜಿ , ಶ್ರೀಕಾಂತ್ ಅರಸಿದ್ದಿ, ವಿರುಪಾಕ್ಷ ನಸಲಿ, ಸಾಗರ್ ಗ್ವಾಲಿ ಸಭೆಯಲ್ಲಿ ಉಪಸ್ಥಿತರಿದ್ದರು.

## ವಿವಿಧ ಬೇಡಿಕೆಗಳ ಈಡೇರಿಕೆಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಣಿ ಚನ್ನಮ್ಮ ಪಾರ್ಟಿಯ ವತಿಯಿಂದ ಬೆಳಗಾವಿ ಅಧಿವೇಶನದಲ್ಲಿ ಅಂಗವಿಕಲರಿಗೆ, ರೈತರಿಗೆ, ವಿದ್ಯಾರ್ಥಿಗಳಿಗೆ ಸಂಬಂಧಿಸಿದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ರಾಣಿ ಚನ್ನಮ್ಮ ಪಾರ್ಟಿ ರಾಜ್ಯ ಉಪಾಧ್ಯಕ್ಷ ಪರಸಪ್ಪ ಭೀಮಪ್ಪ ಗಜ್ಜರಿ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ಅಪರಸಪ್ಪ ಗಜ್ಜರಿ, ಅಂಗವಿಕಲರಿಗೆ ಪಿಂಚಣಿ ಹೆಚ್ಚಳ ಮಾಡಬೇಕು, ಕರ್ನಾಟಕ ರಾಜ್ಯಾದ್ಯಂತ ಅಂಗವಿಕಲರಿಗೆ 100 ಕಿ.ಮಿವರೆಗೆ ಇದ್ದ ಉಚಿತ ಬಸ್ ಪಾಸ್‌ನ್ನು ಕರ್ನಾಟಕ ರಾಜ್ಯಾದ್ಯಂತ ವಿಸ್ತರಿಸುವುದು, ಅಂಗವಿಕಲರಿಗೆ ಆಶ್ರಯ ಮನೆಗಳನ್ನು ಉಚಿತವಾಗಿ ಕಟ್ಟಿಸಿಕೊಡುವುದು, ಅಂಗವಿಕಲರಿಗೆ ಉದ್ಯೋಗ ಮಾಡಲು ಸರ್ಕಾರದಿಂದ 5 ಲಕ್ಷ ರೂಪಾಯಿಗಳವರೆಗೆ ರಾಜ್ಯ ಎಲ್ಲಾ ಬ್ಯಾಂಕ್‌ಗಳ ಮೂಲಕ ಸಬ್ಸಿಡಿ ಮೂಲಕ ಲೋನ್ ಮಂಜೂರಾತಿ ಮಾಡಿಸುವುದು, ಕೂಲಿ ಕಾರ್ಮಿಕರು, ವಲಸೆ ಕಾರ್ಮಿಕರು, ಹಿಂದುಳಿದ ವರ್ಗದವರಿಗೆ ಪ್ರೋತ್ಸಾಹ ಧನವನ್ನು ನೀಡುವುದು ಇತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿದರು.

# ವಧು–ವರರ ಸಮಾವೇಶ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಗಂಗಾಮತ ಸಮಾಜದ ವಧು–ವರ ಸಮಾವೇಶ 19–01–2025ರಂದು ನಗರದ ಮುಳಗುಂದ ನಾಕಾ ಹತ್ತಿರದ ಕ್ಲಾರ್ಕ್ಸ್ ಇನ್ ಸ್ಟಾರ್ ಹೊಟೇಲ್ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ವಧು–ವರರ ಫೋಟೋ ಹಾಗೂ ವಿಡಿಯೋಗಳನ್ನು ಸ್ಕ್ರೀನ್ ಪ್ಲೇ ಮೂಲಕ ತೋರಿಸಿಲಾಗುತ್ತದೆ. ವಧು – ವರರು 31/12/2024ರೊಳಗಾಗಿ ಹೆಸರು ನೋಂದಾಯಿಸಿಕೊಳ್ಳಬೇಕು. ಪ್ರತಿಯೊಬ್ಬ ವಧು–ವರರಿಗೆ ಪ್ರವೇಶ ಶುಲ್ಕ 1 ಸಾವಿರ ರೂ ಇರುತ್ತದೆ. ವಧು–ವರರ ಜೊತೆ ಬಂದ ಪೋಕರಿಗೆ ಪ್ರತಿಯೊಬ್ಬರಿಗೂ ಪ್ರತ್ಯೇಕ ಶುಲ್ಕ ಇರುತ್ತದೆ. ವಧು–ವರರು ತಮ್ಮ ಪೂರ್ಣ ಭಾವಚಿತ್ರ, ಬಯೋಡೇಟಾವನ್ನು ಸಂಚಾಲಕರ ವಾಟ್ಸಾಪ್ ನಂಬರಿಗೆ ಕಳಿಸಬೇಕು. ಯಾವುದೇ ಏಜೆಂಟರಿಗೆ ಪ್ರವೇಶ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ–9880638379 ಸಂಪರ್ಕಿಸಲು ಕೋರಲಾಗಿದೆ.

## ಡಾ. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಬರುವ ಜನಾಂಗದ ಫಲಾಪೇಕ್ಷಿಗಳಿಗೆ ಮಾತ್ರ ನಿಗಮದಿಂದ ಅನುಷ್ಠಾನಗೊಳ್ಳುತ್ತಿರುವ ಸ್ವಯಂ ಉದ್ಯೋಗ ನೇರ ಸಾಲ- ಕುರಿ ಸಾಗಾಣಿಕೆ, ಸ್ವಾವಲಂಬಿ ಸಾರಥಿ- ಫುಡ್ ಕಾರ್ಟ್ ಯೋಜನೆಗಳಡಿ 2024-25 ನೇ ಸಾಲಿಗೆ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸಲ್ಲಿಸಬೇಕಾದ ಅರ್ಹ ಫಲಾಪೇಕ್ಷಿಗಳು ಗ್ರಾಮ-1/ಕರ್ನಾಟಕ-1/ ನಿಮ್ಮ ಹತ್ತಿರದ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಬೇಕಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಡಿಸೆಂಬರ್ 29 ಆಗಿರುತ್ತದೆ. ಹಾಗೂ 2023-24 ಮತ್ತು 2024-25ನೇ ಸಾಲಿನಲ್ಲಿ ಈ ಯೋಜನೆಗಳಡಿ ಅರ್ಜಿ ಸಲ್ಲಿಸಿದವರು ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶವಿರುವದಿಲ್ಲ, ಮತ್ತು ಈಗಾಗಲೇ ಈ ಯೋಜನೆಗಳಡಿ ಅರ್ಜಿ ಸಲ್ಲಿಸಿದವರು ಉದ್ದೇಶ ಬದಲಾವಣೆ ಮಾಡಲು ಇಚ್ಛಿಸಿದಲ್ಲಿ ನೇರವಾಗಿ ನಿಗಮದ website: https://swdcorp.karnataka.gov.in/ADCL Portal ನಲ್ಲಿ ಉದ್ದೇಶ ಬದಲಾವಣೆ ಮಾಡಿಕೊಳ್ಳುವ ಬಗ್ಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, .ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

### ಜಿಲ್ಲೆಯಲ್ಲಿ ಯಶಸ್ವಿಯಾದ ರಾಷ್ಟ್ರೀಯ ಲೋಕ ಅದಾಲತ್: ಜಿಲ್ಲಾ ನ್ಯಾ. ಬಸವರಾಜ

# 34604 ಪ್ರಕರಣಗಳ ರಾಜೀ ಸಂಧಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಡಿ.14ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿತ್ತು. ಜಿಲ್ಲೆಯಲ್ಲಿ ಒಟ್ಟು 15 ಬೆಂಚ್‌ಗಳನ್ನು ರಚಿಸಿ ರಾಜೀ ಸಂಧಾನಕ್ಕೆ ಆಯ್ಕೆ ಮಾಡಿಕೊಳ್ಳಲಾಗಿತ್ತು. ಅದರಲ್ಲಿ 3042 ನ್ಯಾಯಾಲಯದಲ್ಲಿರುವ ಚಾಲ್ತಿ ಪ್ರಕರಣಗಳನ್ನು ಹಾಗೂ 31562 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಲಾಗಿದ್ದು, ಒಟ್ಟು 34604 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ತಿಳಿಸಿದ್ದಾರೆ.



ಇತ್ಯರ್ಥಗೊಂಡ ಪ್ರಕರಣಗಳಲ್ಲಿ 24 ಮೋಟಾರು ವಾಹನ ಅಪಘಾತ ಪ್ರಕರಣಗಳು, 124 ಚೆಕ್‌ಬೌನ್ಸ್ ಪ್ರಕರಣಗಳು, 33 ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು, 130 ಪಾಲುವಾಟ್ನಿ ಪ್ರಕರಣಗಳು, 65 ಬ್ಯಾಂಕ್ ಹಾಗೂ ಹಣ ವಸೂಲಾತಿ ಪ್ರಕರಣಗಳು, 60 ವೈವಾಹಿಕ ಪ್ರಕರಣಗಳು, 59 ವಿದ್ಯುತ್ ಕಾಯ್ದೆ ಪ್ರಕರಣಗಳು ಹಾಗೂ ಇತರೆ ಪ್ರಕರಣಗಳು ಸೇರಿದಂತೆ ಒಟ್ಟು 3042 ಚಾಲ್ತಿ ಪ್ರಕರಣಗಳನ್ನು ಒಟ್ಟು ರೂ.12,65,14,437ಗಳಿಗೆ ಪರಿಹಾರ ಒದಗಿಸುವುದರ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಗದಗದಲ್ಲಿ ಜರುಗಿದ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮದಲ್ಲಿ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಸವರಾಜ, ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರ ಎಸ್.ಶೆಟ್ಟಿ, ಪ್ರಧಾನ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಖಾಶಿಮ ಚೂರಿಖಾನ್, 1ನೇ ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಖಾದರಸಾಬ ಎಚ್ ಬೆನಕಟ್ಟಿ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ವ ಸಿಜೆಎಂ ಜಿ.ಆರ್. ಶೆಟ್ಟರ, ಅಪರ ಹಿರಿಯ ದಿವಾಣಿ ನ್ಯಾಯಾಧೀಶರಾದ ಪದ್ಮಶ್ರೀ ಆರ್.ಪಾಟೀಲ, ಜೆಎಂಎಫ್‌ಸಿ 1ನೇ ನ್ಯಾಯಾಲಯದ ದಿವಾಣಿ ನ್ಯಾಯಾಧೀಶರಾದ ದೀಪ್ತಿ ನಾಡಗೌಡ್ರ, ಜೆಎಂಎಫ್‌ಸಿ 2ನೇ ನ್ಯಾಯಾಲಯದ ದಿವಾಣಿ ನ್ಯಾಯಾಧೀಶರಾದ ಬೀರಪ್ಪ ಕಾಂಬಳೆ ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಂ.ಐ.ಹಿರೇಮನಿ ಪಾಟೀಲ, ಉಪಾಧ್ಯಕ್ಷರಾದ ಎ.ಎಂ. ಹದ್ಲಿ, ಪ್ರಧಾನ ಕಾರ್ಯದರ್ಶಿ ಬಿ.ಎಚ್. ಮಾಡಲಗೇರಿ, ಜಂಟಿ ಕಾರ್ಯದರ್ಶಿ ಪಿ.ಬಿ. ಕಣಗಿನಹಾಳ, ಖಜಾಂಚಿ ವಿ.ಎಚ್. ಮೇರವಾಡೆ, ಸರ್ಕಾರಿ ಅಭಿಯೋಜಕರಾದ ಸವಿತಾ ಎಂ.ಶಿಗ್ಲಿ, ಜಿಲ್ಲಾ ಸರ್ಕಾರಿ ವಕೀಲರಾದ ಎಂ.ಎಂ. ಕುಕನೂರ, ಅಪರ ಜಿಲ್ಲಾ ಸರ್ಕಾರಿ ವಕೀಲರಾದ ಜಿ.ಬಿ. ನೀಲರಡ್ಡಿ, ಹಾಗೂ ವಕೀಲ ವೃಂದದವರು, ಸಂಧಾನಕಾರ ವಕೀಲರು, ಪಕ್ಷಗಾರರು ಹಾಗೂ ಎಲ್ಲಾ ನ್ಯಾಯಾಲಯಗಳ ಸಿಬ್ಬಂದಿ ವರ್ಗ ಉಪಸ್ಥಿತರಿದ್ದು ಲೋಕ ಅದಾಲತ್ ಯಶಸ್ವಿಗೊಳಿಸಿದರು. ಅಂತೆಯೇ ಎಲ್ಲಾ ತಾಲೂಕಗಳ ನ್ಯಾಯಾಧೀಶರು ಹಾಗೂ ವಕೀಲ ವೃಂದದವರು, ಸಿಬ್ಬಂದಿ ವರ್ಗ, ಅಭಿಯೋಜನಾ ಇಲಾಖೆ, ಪೊಲೀಸ್ ಇಲಾಖೆ, ಅಬಕಾರಿ ಇಲಾಖೆ, ಗಣಿ ಮತ್ತು ಭೂ ಇಲಾಖೆ, ಕಾರ್ಮಿಕ ಇಲಾಖೆ, ಕಂದಾಯ ಇಲಾಖೆ ಅಧಿಕಾರಿಗಳು ಕೂಡಾಆಯಾತಾಲೂಕಾ ನ್ಯಾಯಾಲಯಗಳಲ್ಲಿ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ರಾಜೀ ಸಂಧಾನ ಯಶಸ್ವಿಗೊಳಿಸಿದರು.

ರಾಷ್ಟ್ರೀಯ ಲೋಕ ಅದಾಲತ್‌ಗೆ ಸಹಕಾರ ನೀಡಿದ ಗದಗ ಜಿಲ್ಲೆಯ ಎಲ್ಲಾ ವಕೀಲರ ಸಂಘದ ಸರ್ವ ಸದಸ್ಯರಿಗೆ ಹಾಗೂ ಪಕ್ಷಗಾರರಿಗೆ, ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ, ಸಿಬ್ಬಂದಿ ವರ್ಗದವರಿಗೆ, ಜಿಲ್ಲಾ ನ್ಯಾಯಾಲಯದ ತಾಂತ್ರಿಕ ಸಿಬ್ಬಂದಿ ವರ್ಗದವರಿಗೆ, ಜಿಲ್ಲಾಡಳಿತ, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ, ಎಲ್ಲಾ ಮಾಧ್ಯಮದವರಿಗೆ, ಲೋಕ ಅದಾಲತ್‌ಗೆ ಸಹಕಾರ ನೀಡಿದ ಎಲ್ಲರಿಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

> ವ್ಯಾಜ್ಯಪೂರ್ವ ಪ್ರಕರಣಗಳಿಗೆ ಸಂಬಂಧಿಸಿದಂತೆ ವಿವಿಧ ಬ್ಯಾಂಕ್ ಪ್ರಕರಣಗಳು, ಕಂದಾಯ ಅದಾಲತ್ ಪ್ರಕರಣಗಳು ಸೇರಿದಂತೆ ಒಟ್ಟು 31562 ವ್ಯಾಜ್ಯ ಪೂರ್ವ ಪ್ರಕರಣಗಳು ರೂ.3,03,02,015ಗಳಿಗೆ ರಾಜೀ ಸಂಧಾನವಾಗಿದೆ. ಗದಗ ಜಿಲ್ಲೆಯಲ್ಲಿ ವಿವಿಧ ಕೌಟುಂಬಿಕ ಪ್ರಕರಣಗಳಲ್ಲಿ ಒಟ್ಟು 17 ಜೋಡಿಗಳು ಪುನಃ ಒಂದುಗೂಡಿ ಹೋಗಿದ್ದಾರೆ.

### ಭಕ್ತ ಕನಕದಾಸರ ಜಯಂತ್ಯುತ್ಸವ, ಬೀರಲಿಂಗೇಶ್ವರ ದೇವಸ್ಥಾನದ ಕಾರ್ತಿಕೋತ್ಸವ

# ಯುವಕರು ದುಶ್ಚಟಗಳಿಂದ ದೂರವಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ತಂದೆ-ತಾಯಿಯರು ಮಕ್ಕಳಿಗೆ ಉತ್ತಮ ಸಂಸ್ಕಾರ, ಶಿಕ್ಷಣ ನೀಡುವ ಮೂಲಕ ಮಕ್ಕಳನ್ನು ಉತ್ತಮ ನಾಗರಿಕನನ್ನಾಗಿ ಮಾಡುವ ಗುರುತರ ಜವಾಬ್ದಾರಿಯನ್ನು ಮರೆಯಬಾರದೆಂದು ಎಂದು ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ ಹೇಳಿದರು.

ಅವರು ಗದಗ ತಾಲೂಕಿನ ಅಡವಿಸೋಮಾಪೂರ ಗ್ರಾಮದಲ್ಲಿ ಜರುಗಿದ ದಾಸಶ್ರೇಷ್ಠ ಭಕ್ತ ಕನಕದಾಸರ 537ನೇ ಜಯಂತ್ಯುತ್ಸವ ಹಾಗೂ ಬೀರಲಿಂಗೇಶ್ವರ ದೇವಸ್ಥಾನದ ಕಾರ್ತಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.




ಹುಟ್ಟು ಆಕಸ್ಮಿಕ, ಸಾವು ನಿಶ್ಚಿತ. ಇದರ ನಡುವೆ ಬದಕಿನಲ್ಲಿ ಮಾಡುವ ಪ್ರತಿಯೊಂದು ಉತ್ತಮ ಕೆಲಸ-ಕಾರ್ಯಗಳು ಬಹಳ ಮುಖ್ಯವಾದುದು. ಯುವ ಜನತೆ ದುಶ್ಚಟಗಳಿಂದ ದೂರ ಉಳಿದು ದೀರ್ಘಾಯುಷಿಗಳಾಗಬೇಕು. ಶಹರಗಳಿಂತ ಹಳ್ಳಿಗಳಲ್ಲಿ ಹಿರಿಯರನ್ನು ಗೌರವದಿಂದ ಕಾಣುವುದು ಕಡಿಮೆಯಾಗುತ್ತಿದೆ ಎಂದು ವಿಷಾದಿಸಿದ ಅವರು, ಹಿರಿಯರ ಮಾತುಗಳನ್ನು ಪಾಲಿಸಿ, ಗೌರವದಿಂದ ನಡೆದುಕೊಳ್ಳುವುದನ್ನು ಕಲಿಯುವ ಜೊತೆಗೆ ಆರ್ಥಿಕವಾಗಿ ಸಬಲರಾಗಿ, ಸುಧಾರಣೆಯತ್ತ ಸಾಗಲು ಯುವ ಜನತೆಗೆ ತಿಳಿಸಿದರು.

ಹಾಲುಮತ ಮಹಾಸಭಾದ ರಾಜಾಧ್ಯಕ್ಷ ರುದ್ರಣ್ಣ ಗುಳಗುಳಿ, ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗ್ರಾಮಸ್ಥರನ್ನು ಸನ್ಮಾನಿಸಿ ಮಾತನಾಡಿ, ಕಾರ್ತಿಕ ಮಾಸದಲ್ಲಿ ಸಾಮೂಹಿಕವಾಗಿ ದೀಪ ಹಚ್ಚುವ ಮಹತ್ವವನ್ನು ತಿಳಿಸಿ, ನಾಡಿನ ಪರಂಪರೆ ಮರೆಯದೆ ದಾಸರು, ಶರಣರು, ಸಂತರು ನೀಡಿದ ಮಾರ್ಗದರ್ಶನಲ್ಲಿ ಸಾಗಬೇಕು ಎಂದರು.

ಕಾಂಗ್ರೆಸ್ ಯುವ ಮುಖಂಡ ಪ್ರಕಾಶ ಕರಿ, ತಾ.ಪಂ ಮಾಜಿ ಸದಸ್ಯ ಪ್ರಹ್ಲಾದ ಹೊಸಳ್ಳಿ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದರು. ವೇದಿಕೆಯಲ್ಲಿ ಗ್ರಾ.ಪಂ ಅಧ್ಯಕ್ಷೆ ಕೀರ್ತಿ ಪಾಟೀಲ, ಆನಂದಪ್ಪ ಪುರದ, ಈರಪ್ಪ ಹೊಸಳ್ಳಿ, ಅರುಣ ಅಣ್ಣಿಗೇರಿ, ಈರಪ್ಪ ದೊಡ್ಡಮನಿ, ಕಾಶೀಮಸಾಬ ಹರಿವಾಣ, ಜಮಾಲಸಾಬ ಬೇಲೇರಿ, ಮಂಜುನಾಥ ಜಡಿ, ಬಾಳಪ್ಪ ಕೊಪ್ಪದ, ಜನಪದ ಕಲಾವಿದ ಹನಮಂತ ಬಟ್ಟೂರ, ಹೇಮಂತ ಎಸ್.ಜಿ, ಕುಮಾರ ಮಾರನಬಸರಿ, ಅಚ್ಚು, ಪ್ರವೀಣ, ಸಚ್ಚಿನ, ಸುನೀಲ, ರವಿ ಹುಡೇದ, ಬಸಣ್ಣ ಕರಬಿಷ್ಠಿ ಸೇರಿದಂತೆ ಗ್ರಾಮದ ಹಿರಿಯರು, ಯುವ ಮುಖಂಡರು ಉಪಸ್ಥಿತರಿದ್ದರು.

ಸಮಾರಂಭಕ್ಕೂ ಮುನ್ನ ಗ್ರಾಮದ ಪ್ರಮುಖ ಬೀದಿಗಳಲ್ಲಿ ಡೊಳ್ಳಿನ ಮೇಳದೊಂದಿಗೆ ದಾಸಶೇಷ್ಠ ಭಕ್ತ ಕನಕದಾಸರ ಭಾವಚಿತ್ರ ಮೆರವಣಿಗೆಯ ಜರುಗಿತು. ಮೆರವಣಿಗೆಗೆ ಮಾಜಿ ಶಾಸಕ ಬಿ.ಆರ್. ಯಾವಗಲ್ ಚಾಲನೆ ನೀಡಿದರು. ಸ್ಥಳೀಯ ಶ್ರೀ ಸಿದ್ದಲಿಂಗೇಶ್ವರ ಕಲಾ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ, ಲಂಬಾಣಿ ನೃತ್ಯ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಜರುಗಿದವು.

> ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿದ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ, ಉತ್ತಮ ಸಮಾಜವನ್ನು ನಿರ್ಮಾಣ ಮಾಡುವದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಕೆಲಸಗಳನ್ನು ಮಾಡಬೇಕು. ಇಂತಹ ಕಾರ್ಯಕ್ರಮಗಳನ್ನು ಅತ್ಯಂತ ಅಚ್ಚುಕಟ್ಟಾಗಿ ನಿಭಾಯಿಸಬೇಕೆಂದು ತಿಳಿಸಿದರು.

### ರಾಜ್ಯ ಮಟ್ಟದ ಭಜನಾ ಸ್ಪರ್ಧೆ

## ದುರ್ಗಾದೇವಿ ಭಜನಾ ಸಂಘಕ್ಕೆ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಮೀಪದ ಹರ್ಲಾಪೂರ ಗ್ರಾಮದಲ್ಲಿ ಕೊಟ್ಟೂರೇಶ್ವರ ಮಠದ ನಮ್ಮೂರ ಲಕ್ಷ ದೀಪೋತ್ಸವದಂಗವಾಗಿ ಕೊಟ್ಟೂರೇಶ್ವರ ಭಜನಾ ಸಂಘದ ಆಶ್ರಯದಲ್ಲಿ ನಡೆದ ರಾಜ್ಯ ಮಟ್ಟದ ಹೊನಲು-ಬೆಳಕಿನ ಭಜನಾ ಸ್ಪರ್ಧೆಯಲ್ಲಿ ರಾಮದುರ್ಗದ ದುರ್ಗಾದೇವಿ ಭಜನಾ ಸಂಘವು ಪ್ರಥಮ ಸ್ಥಾನ ಪಡೆದು ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿತು.

ನರಗುಂದ ತಾಲೂಕಿನ ಕೊಣ್ಣೂರು ಗ್ರಾಮದ ಬಾಯಮ್ಮದೇವಿ ಭಜನಾ ಸಂಘ ದ್ವಿತೀಯ, ಮುಂಡರಗಿ ತಾಲೂಕು ಜಂತ್ಲಿಶಿರೂರ ಗ್ರಾಮದ ತಾಯಮ್ಮದೇವಿ ಭಜನಾ ಸಂಘ ತೃತೀಯ ಹಾಗೂ ಚಿಕ್ಕ ಬಳಗೇರಿಯ ಬಾಬಾ ಭಜನಾ ಮಹಾರಾಜ ಸಂಘವು ಚತುರ್ಥ ಸ್ಥಾನ ಪಡೆಯಿತು. ಗದಗ, ಧಾರವಾಡ, ಬೆಳಗಾವಿ, ಕೊಪ್ಪಳ, ಬಳ್ಳಾರಿ ಜಿಲ್ಲೆಯ 16 ತಂಡಗಳು ಭಾಗವಹಿಸಿದ್ದವು.

ಭಜನಾ ಸ್ಪರ್ದೆಯ ಕಾರ್ಯಕ್ರಮವನ್ನು ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಉದ್ಘಾಟಿಸಿ ಮಾತನಾಡುತ್ತಾ, ಇಂದಿನ ಮೊಬೈಲ್, ತಂತ್ರಜ್ಞಾನ ಯುಗದಲ್ಲಿ ಜಾನಪದ ಕಲೆಗಳು ಮರೆಯಾಗುತ್ತಿವೆ. ಇದರ ಉಳಿವಿಗಾಗಿ ಗ್ರಾಮದ ಕೊಟ್ಟೂರೇಶ್ವರ ಭಜನಾ ಸಂಘವು ರಚನೆಯಾದ ನಾಲ್ಕೇ ದಿನದಲ್ಲಿ ರಾಜ್ಯ ಮಟ್ಟದ ಭಜನಾ ಸ್ಪರ್ಧೆ ಆಯೋಜಿಸಿರುವುದು ಉತ್ತಮ ಕಾರ್ಯ ಎಂದರು.

ಶಿವಕುಮಾರಸ್ವಾಮಿ ಮಜ್ಜಿಗುಡ್ಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಳಖೇಡದ ಕೊಟ್ಟೂರೇಶ್ವರ ಶಿವಾಚಾರ್ಯರು, ಹರ್ತಿಮಠದ ಫಕ್ಕೀರಯ್ಯ ಶ್ರೀಗಳು, ಗ್ರಾ.ಪಂ ಅಧ್ಯಕ್ಷೆ ರೇಣುಕಾ ವಡ್ಡರ, ಉಪಾಧ್ಯಕ್ಷ ಅಡಿವೆಪ್ಪ ಗೌಡಪ್ಪನವರ, ಸದಸ್ಯರಾದ ಶಿದ್ದಲಿಂಗೇಶ ಯಾಳವಾಡ, ಅಕ್ಕಮ್ಮ ಕೋಗಿಲೆ, ನಿರ್ಮಲಾ ಕೊತ್ತಪ್ಪನವರ, ಕೆ.ಬಿ. ಕೊಣ್ಣೂರು, ಸಂಗೀತ ಕಲಾವಿದ ಕೆ.ಬಿ. ವೀರಾಪೂರ, ಮಹಾಂತೇಶ ಲಕ್ಕುಂಡಿ, ಶರಣಪ್ಪಗೌಡ ಪಾಟೀಲ, ಗೋವಿಂದರೆಡ್ಡಿ ಕೊಣ್ಣೂರು, ಸಂತೋಷ ವಡ್ಡರ, ಮಲಕಾಜಪ್ಪ ಯಾಳವಾಡ, ಮಹಾಲಿಂಗಪ್ಪ ಜಮಲಿಂಗಪ್ಪನವರ, ಮಲ್ಲಿಕಾಜುನಗೌಡ ಉಮಚಗಿ, ಅಶೋಕ ಯಲಿಗಾರ, ರಾಮಣ್ಣ ಬೆಳಧಡಿ, ಶಿವಾನಂದಪ್ಪ ಯಾಳವಾಡ ಉಪಸ್ಥಿತರಿದ್ದರು. ಡಾ. ಎಸ್.ಸಿ. ಸರ್ವಿ ಸ್ವಾಗತಿಸಿದರು. ವೆಂಕಟೇಶ ಜುಂಜಣಿ ನಿರೂಪಿಸಿ ವಂದಿಸಿದರು.

## ಮಲ್ಲಿಕಾರ್ಜುನ ಜಿ.ಡಿಗೆ ಪಿಎಚ್‌ಡಿ ಪದವಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ಇಲೆಕ್ಟ್ರಿಕಲ್ ಆ್ಯಂಡ್ ಇಲೆಕ್ಟ್ರಾನಿಕ್ಸ್ ವಿಭಾಗದ ಸಹಾಯಕ ಪ್ರಾಧ್ಯಾಪಕ ಪ್ರೊ. ಮಲ್ಲಿಕಾರ್ಜುನ ಜಿ.ಡಿ ಇವರು ಪಿಎಚ್‌ಡಿ ಪದವಿಗಾಗಿ ತುಮಕೂರಿನ ಪ್ರತಿಷ್ಠಿತ ಶ್ರೀ ಸಿದ್ಧಾರ್ಥ ಅಕಾಡೆಮಿ ಆಫ್ ಹೈಯರ್ ಎಜುಕೇಶನ್(ಸಾಹೆ, ಡಿಮ್ಡ್ ವಿಶ್ವವಿದ್ಯಾಲಯ)ಗೆ ಮಂಡಿಸಿದ ಅನಾಲಿಸಿಸ್ ಆಫ್ ಪವರ್ ಕ್ವಾಲಿಟಿ ಫಾರ್ ಗ್ರಿಡ್ ಕನೆಕ್ಟೆಡ್ ಸೋಲಾರ್ ಪಿ.ವಿ ಸಿಸ್ಟಮ್ ಮಹಾ ಪ್ರಬಂಧಕ್ಕೆ ಡಾಕ್ಟರೇಟ್ ಲಭಿಸಿದ್ದು, ತುಮಕೂರಿನಲ್ಲಿ ನಡೆದ 13ನೇ ಘಟಿಕೋತ್ಸವದಲ್ಲಿ ವಿಶ್ವವಿದ್ಯಾಲಯದ ಕುಲಾಧಿಪತಿಗಳು ಮತ್ತು ಗೃಹ ಸಚಿವರಾದ ಡಾ. ಜಿ. ಪರಮೇಶ್ವರ ಪಿಎಚ್‌ಡಿ ಪದವಿ ಪ್ರದಾನ ಮಾಡಿದರು. ಎಸ್‌ಎಸ್‌ಐಟಿ ಕಾಲೇಜಿನ ಪ್ರಾಧ್ಯಾಪಕ ಡಾ. ಜಿ.ಎಸ್. ಶೇಷಾದ್ರಿ ಮಾರ್ಗದರ್ಶನದಲ್ಲಿ ಪಿಎಚ್‌ಡಿ ಮಹಾ ಪ್ರಬಂಧ ಮಂಡಿಸಿದ್ದರು. ಮಲ್ಲಿಕಾರ್ಜುನ ಜಿ.ಡಿ ಮೂಲರ್ತ ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲೂಕಿನ ವಡ್ನಾಳ್ ಗ್ರಾಮದವರಾಗಿದ್ದಾರೆ. ಘಟಿಕೋತ್ಸವದಲ್ಲಿ ಮುಖ್ಯ ಅತಿಥಿಗಳಾಗಿ ಎಐಸಿಟಿಇನ ಚೇರ್‌ಮನ್ ಡಾ. ಟಿ.ಜಿ. ಸೀತಾರಾಮ್, ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಲಿಂಗೇಗೌಡ ಕೆ.ಬಿ, ಕುಲಸಚಿವ ಡಾ. ಎಮ್.ಜೆಡ್. ಕುರಿಯನ್, ಮೌಲ್ಯಮಾಪನ ಕುಲಸಚಿವ ಡಾ. ಗುರುಶಂಕರ್.ಜಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಇವರ ಈ ಸಾಧನೆಗೆ ತೋಂಟದಾರ್ಯ ಮಠದ ಪೀಠಾಧಿಪತಿಗಳಾದ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಕಾರ್ಯದರ್ಶಿ ಪ್ರೊ. ಎಸ್. ಎಸ್. ಪಟ್ಟಣಶೆಟ್ಟಿ, ಕಾಲೇಜಿನ ಪ್ರಾಂಶುಪಾಲ ಡಾ. ಎಂ.ಎಂ. ಆವಟಿ, ವಿಭಾಗದ ಮುಖ್ಯಸ್ಥ ಡಾ. ಈರಣ್ಣ ಕೋರಚಗಾವ್, ಕಾಲೇಜಿನ ಬೋಧಕ- ಬೋಧಕೇತರ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

## ಡಿ.20ರಂದು ಲಿಡ್ಕರ್ ನಿಗಮದ ಫಲಾನುಭವಿಗಳ ಆಯ್ಕೆ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಲಿಡ್ಕರ್ ನಿಗಮ ಕೇಂದ್ರ ಕಚೇರಿ ಬೆಂಗಳೂರು ಇವರ ವತಿಯಿಂದ ಗದಗ ಜಿಲ್ಲೆ 2024-25ನೇ ಸಾಲಿನ ವಿವಿಧ ಯೋಜನೆ ಬಗ್ಗೆ ಚರ್ಮ ಕುಶಲಕರ್ಮಿಗಳ ಆಯ್ಕೆಗಾಗಿ ಉಪನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಗದಗ ಇವರ ಆದೇಶದ ಮೇರೆಗೆ ಡಿಸೆಂಬರ್ 20 ರಂದು ಬೆ 11 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ಭವನ ಗದಗ ಇಲ್ಲಿ ಸಭೆಯನ್ನು ಕರೆಯಲಾಗಿದೆ. ಫಲಾಪೇಕ್ಷಿಗಳು ಸಮಯಕ್ಕೆ ಸರಿಯಾಗಿ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಲಿಡ್ಕರ್ ನಿಗಮದ ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಮ್.ಜಿ ಚಾರಿಟೇಬಲ್ ವತಿಯಿಂದ ಲೇಖನ ಸಾಮಗ್ರಿ, ಯೂನಿಫಾರ್ಮ್ ವಿತರಣೆ

# ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರಿ ಹಿರಿಯ ಉರ್ದು ಪ್ರಾಥಮಿಕ ಗಂಡು ಮಕ್ಕಳ ನಂ.1 ಬೆಟಗೇರಿಯಲ್ಲಿ ವಿದ್ಯಾರ್ಥಿಗಳಿಗೆ ಟೇಬಲ್-ಖುರ್ಚಿ, ಐಡಿ ಕಾರ್ಡ್ ಹಾಗೂ ಲೇಖನ ಸಾಮಗ್ರಿಗಳನ್ನು ವಿತರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ಮಲಿಕಸಾಬ ಬೇಲೇರಿ ವಹಿಸಿದ್ದರು.

ಕಾರ್ಯಕ್ರಮ ಉದ್ಘಾಟಿಸಿದ ಗದಗ ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮಂಗಳಾ ತಾಪಸ್ಕರ್ ಮಾತನಾಡುತ್ತಾ, ಮಹಿಳೆ ಒಬ್ಬಳು ಕಲಿತರೆ ಇಡೀ ಕುಟುಂಬವನ್ನು ಕಲಿಸುವ ಜವಾಬ್ದಾರಿ ಅವಳ ಮೇಲೆ ಇರುತ್ತದೆ. ಹೀಗಾಗಿ ಇಲ್ಲಿ ಬಂದಿರುವ ತಾಯಂದಿರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ಕೊಡಬೇಕು ಎಂದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ಮೌಲಾನಾ ಅಬ್ದುಲಗಪೂರ್ ಪಲ್ಲೇದ ಮಾತನಾಡಿ, ಮನೆಯಲ್ಲಿ ತಾಯಂದಿರು ಮೊಬೈಲ್-ಟಿವಿಗಳಿಂದ ದೂರವಿದ್ದು ತ್ಯಾಗ ಮಾಡಿದಾಗ ಮಾತ್ರ ಮಗು ಸಾಧಕನಾಗಲು ಸಾಧ್ಯ. ಹೀಗಾಗಿ ತಮ್ಮೆಲ್ಲರ ಜವಾಬ್ದಾರಿ ಬಹಳಷ್ಟು ಇದೆ ಅದನ್ನರಿತು ನಡೆಯಬೇಕು ಎಂದರು.



ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಪಿ. ಪ್ರಭಯ್ಯನಮಠ ಮಾತನಾಡುತ್ತಾ, ಅತ್ಯಂತ ಕಡಿಮೆ ಅವಧಿಯಲ್ಲಿ ಶಾಲೆಯ ಅಭಿವೃದ್ಧಿಗಾಗಿ ಟೇಬಲ್-ಖುರ್ಚಿ ವ್ಯವಸ್ಥೆ ಮಾಡಿಕೊಟ್ಟಿರುವ ಶಿಕ್ಷಕರ ಕಾರ್ಯ ಪ್ರಶಂಸನೀಯ ಎಂದರು.

ಈ ಸಂದರ್ಭದಲ್ಲಿ ಶಾಲೆಯಲ್ಲಿ 30ರವರೆಗೆ ಮಗ್ಗಿ ಹೇಳಿದ ವಿದ್ಯಾರ್ಥಿ ಯೂಸೂಫ್‌ನಿಗೆ ಶಾಲೆಯ ಶಿಕ್ಷಕರಾದ ಫಾರೂಕ್ ನಾಯಕ ಅವರು ಬಹುಮಾನ ನೀಡಿ ಪ್ರೋತ್ಸಾಹಿಸಿದರು. ವಿದ್ಯಾರ್ಥಿಗಳಿಗಾಗಿ ಶಾಲೆಯ ಮುಖ್ಯ ಶಿಕ್ಷಕರಾದ ಹುಲ್ಲೂರು ಅವರ ಪತಿಯವರಾದ ಸಲೀಂ ಬಳಬಟ್ಟಿ 4 ಟೇಬಲ್, 14 ಖುರ್ಚಿಗಳನ್ನು ಶಾಲೆಗೆ ಕೊಡುಗೆಯಾಗಿ ನೀಡಿದರು.

ವಿದ್ಯಾರ್ಥಿಗಳಿಗೆ ಚಾರಿಟೇಬಲ್ ಟ್ರಸ್ಟ್‌ನ ವತಿಯಿಂದ ಐ.ಡಿ ಕಾರ್ಡ್ ಹಾಗೂ ಲೇಖನ ಸಾಮಗ್ರಿಗಳನ್ನು ವಿತರಿಸಲಾಯಿತು.

ವೇದಿಕೆಯ ಮೇಲೆ ಎಂ.ಜಿ. ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷ ಮಕ್ತುಮಸಾಬ ನಾಯಕ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಗದಗ ಶಹರ ವಲಯದ ಕಾರ್ಯದರ್ಶಿ ಕನಾಜ, ಖಜಾಂಚಿ ರಶೀದ, ಶಾಮ ಲಾಂಡೆ, ಪ್ರಕಾಶ ಮಂಗಳೂರು ಹಾಗೂ ಶಾಲೆಯ ಸಿಬ್ಬಂದಿ ವರ್ಗದವರು ಹಾಜರಿದ್ದರು.

> ಪ್ರಾಸ್ತಾವಿಕವಾಗಿ ಮಾತನಾಡಿದ ಬಿಆರ್‌ಪಿ ಎಂ.ಎ. ಯರಗುಡಿ, ಮನುಷ್ಯನು ಬದಲಾವಣೆಯಾಗುವುದೇ ಶಿಕ್ಷಣದಿಂದ. ಹೀಗಾಗಿ ಅತ್ಯುತ್ತಮವಾದ ಶಿಕ್ಷಣ ಕೊಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಮಕ್ಕಳ ಉತ್ತಮ ಶಿಕ್ಷಣಕ್ಕಾಗಿ ತನು, ಮನ, ಧನದಿಂದ ಕೆಲಸ ಮಾಡುತ್ತಿರುವ ಶಾಲೆಯ ಶಿಕ್ಷಕರ ಕಾರ್ಯ ಶ್ಲಾಘನೀಯ. ಅಲ್ಲದೆ ಪಾಲಕರು ಮಕ್ಕಳನ್ನು ಮನೆಯಲ್ಲಿ ಮುಂದೆ ಕೂಡಿಸಿಕೊಂಡು ಗಟ್ಟಿ ಧ್ವನಿಯಲ್ಲಿ ಓದುವಂತೆ ಪ್ರೇರೇಪಿಸಬೇಕು. ಪ್ರತಿನಿತ್ಯ ಅವರ ನೋಟ್ ಪುಸ್ತಕಗಳನ್ನು ಪರಿಶೀಲಿಸಿದಾಗ ಓದಿನ ಕಡೆ ಮಕ್ಕಳ ಗಮನ ಬರುವುದು ಸಹಜ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka